ಸಂಪುಟ : 11 ಸಂಚಿಕೆ: 32 ಪುಟ : 4+2 ಬೆಲೆ: 3.00 ಮಂಗಳವಾರ ಮಾರ್ಚ್ 03 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ

Volume : 11 Issue : 32 Pages : 4+2 Price : 3.00 Tuesday March 03 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಗಣಿತಶಾಸ್ತ್ರದಲ್ಲಿ ಸಂಶೋಧನೆಗೆ ಡಾಕ್ಟರೇಟ್: ಕು. ಅಭಿಲಾಷ್ ಲ. ನಂದೆಪ್ಪನವರಿಗೆ ಗೌರವ




■ **ವಿಜಯಸಾಕ್ಷಿ ಸುದ್ದಿ, ಗದಗ**

ಇತ್ತೀಚೆಗೆ ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ನಡೆದ 43ನೇ ವಾರ್ಷಿಕ ಘಟಿಕೋತ್ಸವದಲ್ಲಿ ಗಣಿತಶಾಸ್ತ್ರ ವಿಷಯದಲ್ಲಿ ಸಂಶೋಧನಾ ಪ್ರಬಂಧ ಮಂಡಿಸಿದ ಗದುಗಿನ ಯುವ ಸಂಶೋಧಕ ಕು. ಅಭಿಲಾಶ್ ಲ. ನಂದೆಪ್ಪನವರಿಗೆ ಡಾಕ್ಟರೇಟ್ (ಪಿಎಚ್.ಡಿ.) ಪದವಿ ಪ್ರದಾನಿಸಲಾಯಿತು.

ವಿಶ್ವವಿದ್ಯಾಲಯದ ಗಣಿತ ಅಧ್ಯಯನ ವಿಭಾಗದ ಹಿರಿಯ ಪ್ರಾಧ್ಯಾಪಕಿಯಾದ ಡಾ. ಸಿ. ಸುಲೋಚನಾ ಅವರ ಮಾರ್ಗದರ್ಶನದಲ್ಲಿ "ವಿವಿಧ ದ್ರವಗಳಲ್ಲಿನ ಹರಿವು ಹಾಗೂ ಶಾಖ ವರ್ಗಾವಣೆಗೆ ಸಂಬಂಧಿಸಿದ ಸಂಕೀರ್ಣ ಗಣಿತ ಸಮಸ್ಯೆಗಳ ಸಂಖ್ಯಾತ್ಮಕ ಮತ್ತು ವಿಶ್ಲೇಷಣಾತ್ಮಕ ಅಧ್ಯಯನ" ವಿಷಯದ ಮೇಲೆ ಸಂಶೋಧನಾ ಪ್ರಬಂಧವನ್ನು ಮಂಡಿಸಿ ಅವರು ಈ ಪದವಿಗೆ ಪಾತ್ರರಾದರು.

ಘಟಿಕೋತ್ಸವ ಸಮಾರಂಭದಲ್ಲಿ ಕರ್ನಾಟಕ ರಾಜ್ಯಪಾಲರು ಹಾಗೂ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಥಾವರ್ ಚಂದ್ ಗೆಹ್ಲೋಟ್ ಮತ್ತು ಉನ್ನತ ಶಿಕ್ಷಣ ಸಚಿವರಾದ ಡಾ. ಎಂ.ಸಿ. ಸುಧಾಕರ್ ಅವರ ಸಮ್ಮುಖದಲ್ಲಿ ಅಭಿಲಾಶ್ ಅವರು ಡಾಕ್ಟರೇಟ್ ಪದವಿಯನ್ನು ಸ್ವೀಕರಿಸಿದರು.

## ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ

# ರೇಣುಕಾಚಾರ್ಯರ ತತ್ವಗಳು ಜಗತ್ತಿಗೆ ದಾರಿದೀಪವಾಗಲಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಮಾನವ ಧರ್ಮಕ್ಕೆ ಜಯವಾಗಲಿ, ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂಬ ಜಗದ್ಗುರು ರೇಣುಕಾಚಾರ್ಯರ ಸಂದೇಶವು ಇಂದಿನ ಅಶಾಂತಿಯ ಜಗತ್ತಿಗೆ ಅತ್ಯಂತ ಅವಶ್ಯಕವಾಗಿದೆ ಎಂದು ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅವರು ಹೇಳಿದರು.

ನಗರದ ಜಿಲ್ಲಾಡಳಿತ, ಜಿ.ಪಂ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಜಿಲ್ಲಾಡಳಿತ ಭವನದ ಅಡಿಟೋರಿಯಂ ಸಭಾಂಗಣದಲ್ಲಿ ರವಿವಾರ ಆಯೋಜಿಸಲಾಗಿದ್ದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ-2026 ಕಾರ್ಯಕ್ರಮವನ್ನು ಉದ್ಘಾಟಿಸಿ ಸಚಿವರು ಮಾತನಾಡಿದರು.



ರೇಣುಕಾಚಾರ್ಯರು ಕೇವಲ ಒಂದು ಧರ್ಮಕ್ಕೆ ಸೀಮಿತವಾಗದೆ, ಸಕಲ ಜೀವಾತ್ಮರಿಗೂ ಲೇಸನ್ನು ಬಯಸುವ ಮಾನವೀಯ ಮೌಲ್ಯಗಳನ್ನು ಜಗತ್ತಿಗೆ ಸಾರಿದ್ದಾರೆ. ದಯೆ, ಕರುಣೆ, ಅಹಿಂಸೆ ಮತ್ತು ಸತ್ಯದ ಹಾದಿಯಲ್ಲಿ ನಡೆಯುವುದೇ ನಾವು ಅವರಿಗೆ ಸಲ್ಲಿಸುವ ನಿಜವಾದ ಗೌರವ. ಸರ್ಕಾರಿ ಜಯಂತಿಗಳು ಕೇವಲ ಅಧಿಕಾರಿಗಳ ಕಾರ್ಯಕ್ರಮವಾಗದೆ, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ಅರ್ಥಪೂರ್ಣವಾಗಬೇಕು. ಜಿಲ್ಲಾ ರಂಗಮಂದಿರವು ಇಂತಹ ಸಾಂಸ್ಕೃತಿಕ ಮತ್ತು ವೈಚಾರಿಕ ಕಾರ್ಯಕ್ರಮಗಳಿಂದ ಸದಾ ತುಂಬಿರಲಿ ಎಂದು ಆಶಿಸಿದರು.

ಇಂದಿನ ದಿನಗಳಲ್ಲಿ ಶ್ರೀಮಂತ ರಾಷ್ಟ್ರಗಳ ನಡುವೆ ನಡೆಯುತ್ತಿರುವ ಯುದ್ಧ ಮತ್ತು ಹಿಂಸೆಯ ವಾತಾವರಣವು ಆತಂಕಕಾರಿಯಾಗಿದೆ. ಇಂತಹ ಸಂದರ್ಭದಲ್ಲಿ ಭಾರತೀಯ ಸಂಸ್ಕೃತಿಯ ಶಾಂತಿ ಮಂತ್ರ ಮತ್ತು ರೇಣುಕಾಚಾರ್ಯರ ತತ್ವಗಳು ಜಗತ್ತಿಗೆ ದಾರಿದೀಪವಾಗಲಿ ಎಂದು ಸಚಿವರು ಹಾರೈಸಿದರು.

ಕಾರ್ಯಕ್ರಮದಲ್ಲಿ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ. ಕೆ.ಆರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ, ಶ್ರೀನಿವಾಸ್ ಮೂರ್ತಿ, ಎಸ್.ಎನ್. ಬಳ್ಳಾರಿ ಸೇರಿದಂತೆ ಸಮಾಜದ ಗಣ್ಯರು, ಮುಖಂಡರು, ಸಾರ್ವಜನಿಕರು ಉಪಸ್ಥಿತರಿದ್ದರು.

ಅಕ್ಷತಾ ಹಿರೇಮಠ ಹಾಗೂ ಸಂಗಡಿಗರು ನಾಡಗೀತೆ ಪ್ರಸ್ತುತಪಡಿಸಿದರು. ಪ್ರೊ. ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿದರು. ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಮುದಾಯದ ಸಾಧಕರಿಗೆ ಗೌರವಿಸಿ ಸನ್ಮಾನಿಸಲಾಯಿತು.

> ಉಪನ್ಯಾಸಕರದ ಡಾ. ಜಯಶ್ರೀ ಮಲ್ಲಿಕಾರ್ಜುನ್ ಹೊಸಮನಿ ಮಾತನಾಡಿ, ಜಗದ್ಗುರು ರೇಣುಕಾಚಾರ್ಯರು ಅಗಸ್ತ್ಯ ಮಹರ್ಷಿಗಳಿಗೆ ಬೋಧಿಸಿದ 'ಶಿವಾದ್ವೈತ ಸಿದ್ಧಾಂತ'ವು 'ಸಿದ್ಧಾಂತ ಶಿಖಾಮಣಿ' ಗ್ರಂಥದ ಮೂಲಕ ನಮಗೆ ಲಭ್ಯವಾಗಿದೆ. ಈ ಗ್ರಂಥವು ಅಷ್ಟಾವರಣ, ಪಂಚಾಚಾರ ಮತ್ತು ಷಟಸ್ಥಲಗಳ ಮೂಲಕ ಮನುಷ್ಯನು ಹೇಗೆ ಮುಕ್ತಿಯನ್ನು ಪಡೆಯಬಹುದು ಎಂಬುದನ್ನು ಹಂತ-ಹಂತವಾಗಿ ವಿವರಿಸುತ್ತದೆ. ಮನುಷ್ಯ ಜನ್ಮವು ಅತ್ಯಂತ ದುರ್ಲಭವಾದುದು. ರೇಣುಕಾಚಾರ್ಯರು ಅಂದಿನ ಕಾಲದಲ್ಲೇ ಮಹಿಳೆಯರಿಗೆ ಸಮಾನ ಗೌರವ ನೀಡಿದ್ದರು. ಲಿಂಗಧಾರಣೆ ಮಾಡಿದವರೆಲ್ಲರೂ ಸಮಾನರು ಎಂಬ ತತ್ವದ ಮೂಲಕ ಸಾಮಾಜಿಕ ಮತ್ತು ಧಾರ್ಮಿಕ ಕ್ರಾಂತಿಯನ್ನು ಮಾಡಿದ್ದರು ಎಂದು ಉಪನ್ಯಾಸ ನೀಡಿದರು.

## ವಿವಿಧ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿದ ಶಾಸಕ ಜಿ.ಎಸ್. ಪಾಟೀಲ

# ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಹೆಚ್ಚಿನ ಆದ್ಯತೆ



■ **ವಿಜಯಸಾಕ್ಷಿ ಸುದ್ದಿ, ಡಂಬಳ**

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ಅಭಿವೃದ್ಧಿ ಕಾರ್ಯಗಳಿಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದು, ಗ್ರಾಮೀಣ ರಸ್ತೆ ಅಭಿವೃದ್ಧಿ, ಶಿಕ್ಷಣ, ಮೂಲಸೌಕರ್ಯ ಸುಧಾರಣೆ ಸೇರಿದಂತೆ ಹಲವು ಜನಪರ ಯೋಜನೆಗಳನ್ನು ರೋಣ ಕ್ಷೇತ್ರಾದ್ಯಂತ ಯಶಸ್ವಿಯಾಗಿ ಜಾರಿಗೆ ತಂದಿದೆ ಎಂದು ರೋಣ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಡಂಬಳ ಹೋಬಳಿಯ ಜಂತ್ಲಿ ಶಿರೂರ ಗ್ರಾಮದಲ್ಲಿ 2024-25ನೇ ಸಾಲಿನ ಮಳೆ ಪರಿಹಾರ ಯೋಜನೆಯಡಿ ಶಿರೂರ ಗ್ರಾಮದಲ್ಲಿ ಸಿ.ಸಿ ರಸ್ತೆ ನಿರ್ಮಾಣ, ಶಿರೂರ ಗ್ರಾಮದ ಎಸ್.ಸಿ. ಕಾಲೋನಿಯಲ್ಲಿ ಸಿ.ಸಿ. ರಸ್ತೆ ನಿರ್ಮಾಣ ಕಾಮಗಾರಿಯ ಭೂಮಿ ಪೂಜೆ, ಪೇಠಾಲೂರ ಗ್ರಾಮದಲ್ಲಿ ಹಾಲಪ್ಪ ಕರಿಗಾರ ಮನೆಯಿಂದ ಸೋಮಣ್ಣ ಕರಳ್ಳಿ ಇವರ ಮನೆಯವರೆಗೆ ಸಿ.ಸಿ ರಸ್ತೆ ನಿರ್ಮಾಣ ಕಾಮಗಾರಿಯ ಭೂಮಿಪೂಜೆ, 16 ಲಕ್ಷ ವೆಚ್ಚದಲ್ಲಿ ನವೀಕೃತಗೊಂಡ ಪೇಠಾ ಆಲೂರ ಸರ್ಕಾರಿ ಹಿರಿಯ ಮಾದರಿ ಕೇಂದ್ರ ಶಾಲೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿ ಗ್ರಾಮದ ವಿದ್ಯಾರ್ಥಿಗಳ ಉತ್ತಮ ಸಾಧನೆಗೆ ಸೂಕ್ತ ವಾತಾವರಣ ನಿರ್ಮಾಣಕ್ಕಾಗಿ ಸರ್ಕಾರಿ ಶಾಲೆಗಳ ನವೀಕರಣ, ಸ್ಮಾರ್ಟ್ ತರಗತಿ ಕೊಠಡಿಗಳ ಸ್ಥಾಪನೆ, ವಿದ್ಯಾರ್ಥಿಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವದರ ಮೂಲಕ ಶಿಕ್ಷಣದ ಗುಣಮಟ್ಟ ಹೆಚ್ಚಿಸಲಾಗುತ್ತಿದೆ ಎಂದರು.

ಈಗಾಗಲೇ ಕಂದಾಯ ಇಲಾಖೆಯಲ್ಲಿ ಹಲವು ದಶಕಗಳಿಂದ ಇತ್ಯರ್ಥವಾಗದೇ ಬಾಕಿ ಉಳಿದಿದ್ದ ದರಕಾಸ್ತು ಪೋಡಿ, ಪೌತಿ ಖಾತೆ ಸಮಸ್ಯೆಗಳ ಪರಿಹಾರಕ್ಕೆ ಪರಿಣಾಮಕಾರಿ ಕ್ರಮಗಳನ್ನು ಕೈಗೊಂಡು ರೈತರು, ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗಿದೆ. ಸಾವಿರಾರು ರೈತರು ದರಕಾಸ್ತು ಪೋಡಿ ವಿಶೇಷ ಅಭಿಯಾನದಡಿ ತಮ್ಮ ಸಾಗುವಳಿ ಜಮೀನಿಗೆ ನೈಜ ವಾರಸುದಾರರಾಗಿ ಅಧಿಕೃತ ಹಕ್ಕು ದಾಖಲೆ ಪತ್ರ ಗಳನ್ನು ಪಡೆದುಕೊಳ್ಳುತ್ತಿದ್ದಾರೆ. ಹಲವು ದಶಕಗಳಿಂದ ನನೆಗುದಿಗೆ ಬಿದ್ದಿದ್ದ ಕಂದಾಯ ಇಲಾಖೆಯಲ್ಲಿನ ಹಲವು ಸಮಸ್ಯೆಗಳಿಗೆ ಮುಕ್ತಿ ಕಾಣಿಸಿ ಜನರಿಗೆ ನೆಮ್ಮದಿ ನೀಡಲಾಗುತ್ತಿದೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಗಂಗಾಧರ ಅಣ್ಣಿಗೇರಿ ಮಾತನಾಡಿ, ಪೇಠಾಲೂರ ಸರ್ಕಾರಿ ಹಿರಿಯ ಮಾದರಿ ಕೇಂದ್ರ ಶಾಲೆಯ ನವೀಕರಣದಿಂದ ವಿದ್ಯಾರ್ಥಿಗಳಿಗೆ ಉತ್ತಮ ಕಲಿಕಾ ವಾತಾವರಣ ಸಿಗಲಿದೆ. ತಾಲೂಕಿನ ಎಲ್ಲಾ ಶಾಲೆಗಳ ದುರಸ್ತಿ ಮತ್ತು ನೂತನ ಶಾಲಾ ಕೊಟಡಿಗಳ ನಿರ್ಮಾಣ ಸರ್ಕಾರ ಮತ್ತು ಈ ಭಾಗದ ಶಾಸಕರಾದ ಜಿ.ಎಸ್. ಪಾಟೀಲರು ▶▶3ನೇ ಪುಟಕ್ಕೆ

> ಎಲ್ಲಾ ದಾಖಲೆಗಳನ್ನು ಆನ್‌ಲೈನ್ ಮೂಲಕ ಒಂದೇ ಕಡೆ ಅಥವಾ ಒಂದೇ ಕಚೇರಿಯಲ್ಲಿ ಲಭ್ಯವಾಗುವ ರೀತಿಯಲ್ಲಿ ಹಲವು ಸುಧಾರಣೆಗಳನ್ನು ಇಲಾಖೆ ಈಗಾಗಲೇ ಕೈಗೊಂಡಿದೆ. ಬರುವ ಆಯವ್ಯಯದ ನಂತರ ಜನರು ದೃಢೀಕೃತ ಪಹಣಿ, ಸ್ಕೆಚ್ ಕಾಪಿ, ಇಸಿಎಂಆರ್ ಹಾಗೂ ಆಕಾರ್‌ಬಂದ್ ದಾಖಲೆಗಳನ್ನು ಆನ್‌ಲೈನ್ ಮೂಲಕವೇ ಪಡೆಯುವ ಏಕ ವ್ಯವಸ್ಥೆ ತ್ವರಿತವಾಗಿ ಬರಲಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಭರವಸೆ ನೀಡಿದರು.

## ಮುಖ್ಯಮಂತ್ರಿಗಳ ಚಿನ್ನದ ಪದಕ ವಿಜೇತ ಕಿರಣಕುಮಾರ ಕಟಗಿ ಅವರಿಗೆ ಸನ್ಮಾನ



■ **ವಿಜಯಸಾಕ್ಷಿ ಸುದ್ದಿ, ಗದಗ**

2025ನೇ ಸಾಲಿನ ಕರ್ನಾಟಕ ರಾಜ್ಯ ಮುಖ್ಯಮಂತ್ರಿಗಳ ಚಿನ್ನದ ಪದಕ ಪುರಸ್ಕಾರ ಪಡೆದ ಗೃಹರಕ್ಷಕದಳ ಗದಗ ಜಿಲ್ಲಾ ಕಚೇರಿಯ ಸಿಬ್ಬಂದಿ ಕಿರಣಕುಮಾರ ಕಟಗಿ (ಭೋದಕರು) ಅವರನ್ನು ಗೌರವಿಸಿ ಸನ್ಮಾನಿಸಲಾಯಿತು.

ಗೃಹರಕ್ಷಕದಳ ಇಲಾಖೆಯ ಗದಗ ಜಿಲ್ಲೆಯ ಜಿಲ್ಲಾ ಸಮಾದೇಷ್ಟರಾದ ಚನ್ನಾರಡ್ಡಿ ಬಸವರಾಜ ಗೊಳರಡ್ಡಿ ಅವರು ಕಟಗಿ ಅವರ ಸಾಧನೆಯನ್ನು ಶ್ಲಾಘಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಅಡ್ಜುಟೆಂಟ್ ಕೆ.ಸಿ. ವಕ್ಕಳ, ಘಟಕಾಧಿಕಾರಿ ಎಸ್. ಎಫ್. ದೊಡ್ಡಮನಿ, ಟಿ.ಎಲ್. ರಾಜಕುಮಾರ, ಬಿ.ಡಿ. ನಾಯಕ, ರಮೇಶ್ ಯಚ್ಚಲಗಾರ, ಎಚ್.ಜಿ., ಎ.ಎಂ. ನಾಗನೂರ, ಎ.ಎಸ್. ಅಂಗಡಿ, ಬಿ.ಎಫ್. ಮಡಿವಾಳರ, ಪಿ. ಗೂರನವರ, ಬಿ.ಎಸ್. ಬಸವರಡ್ಡಿ ಸೇರಿದಂತೆ ಗೃಹರಕ್ಷಕ ಮತ್ತು ಗೃಹರಕ್ಷಕಿಯರು ಉಪಸ್ಥಿತರಿದ್ದು ಅಭಿನಂದನೆಗಳನ್ನು ಸಲ್ಲಿಸಿದರು.

ಕಟಗಿ ಅವರ ಸೇವಾ ನಿಷ್ಠೆ ಮತ್ತು ಶಿಸ್ತುಬದ್ಧ ಕಾರ್ಯಕ್ಷಮತೆಗೆ ಈ ಪ್ರಶಸ್ತಿ ಲಭಿಸಿರುವುದು ಜಿಲ್ಲೆಯ ಗೃಹರಕ್ಷಕದಳಕ್ಕೆ ಗೌರವ ತಂದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಸರ್ವಧರ್ಮ ಸಮನ್ವಯದ ದಾರಿಯಲ್ಲಿ ಪೀರಸಾಬ ಕೌತಾಳ- ವ್ಯಕ್ತಿತ್ವ, ಸೇವೆ ಮತ್ತು ರೂಪಾಂತರದ ವಿಶೇಷ ಲೇಖನ

# ಪೀರಸಾಬ ಕೌತಾಳ ಅಂದ್ರೆ ಸರ್ವ ಕ್ಷೇತ್ರಗಳ ಸೇವಕ- ಮಾನವ ಧರ್ಮ ಸಾಧಕ!

ಒಬ್ಬ ವ್ಯಕ್ತಿ ಸರ್ವರೊಳಗೆ ಒಂದಾಗಿ ಅರಿತು ಬೆರೆತು ನಡೆದುಕೊಂಡರೆ ಎಂತಹ ಅದ್ಭುತ ಶಕ್ತಿಯಾಗಿ ಕಾಣಬಹುದು ಎಂಬುದಕ್ಕೆ 'ಸರ್ವ ಕ್ಷೇತ್ರಗಳ ಸೇವಕ, ಮಾನವ ಧರ್ಮದ ಸಾಧಕ'ರಾಗಿರುವ ಪೀರಸಾಬ ಕೌತಾಳ ಅವರು ಸ್ಪಷ್ಟ ಉದಾಹರಣೆ.

"ತನ್ನ ಧರ್ಮವನ್ನು ಪ್ರೀತಿಸು, ಇತರ ಧರ್ಮಗಳನ್ನು ಗೌರವಿಸು" ಎಂಬ ತತ್ವವನ್ನು ಪಾಲಿಸುವಲ್ಲಿ ಯಶಸ್ವಿಯಾಗಿರುವ ಪೀರಸಾಬ ಕೌತಾಳ ಅವರು ಸಾಮಾಜಿಕ, ಶೈಕ್ಷಣಿಕ, ಧಾರ್ಮಿಕ, ರಾಜಕೀಯ ಸೇರಿದಂತೆ ಸರ್ವ ಕ್ಷೇತ್ರಗಳಲ್ಲಿ ನಿಸ್ವಾರ್ಥ ಸೇವಕರಾಗಿ ಎಲ್ಲರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

ಸದಾ ಲವಲವಿಕೆಯಿಂದ ಸ್ನೇಹಮಯ ನಡೆ-ನುಡಿಯಲ್ಲಿ ಎಲ್ಲರನ್ನು ತನ್ನತ್ತ ಸೆಳೆಯುತ್ತಾ ಸಾಮಾಜಿಕ ಸೇವೆಯಲ್ಲಿ ತೊಡಗಿಸಿಕೊಂಡಿರುವ ಪೀರಸಾಬ ಕೌತಾಳರ ಸಾಧನೆ ನಿಜಕ್ಕೂ ಹುಬ್ಬೇರಿಸುವಂತಿದ್ದು, ಕಣ್ಣರಳಿಸುವಂತಿದೆ. ರೂಪಾಂತರದ ಬದುಕು-ಒರಟನಿಂದ ಒಲವಿನತ್ತ

ಒಂದು ಕಾಲದಲ್ಲಿ ಹೊಡಿ-ಬಡಿ ನಡೆ-ನುಡಿಯ, ಒರಟು ಸ್ವಭಾವದವರಾಗಿದ್ದ ಪೀರಸಾಬ ಕೌತಾಳರ ಇಂದಿನ ಬದಲಾವಣೆಗಳನ್ನು ಕಂಡರೆ ಆಶ್ಚರ್ಯವೆನಿಸದೆ ಇರಲಾಗದು.

ಭಕ್ತಿ ಮಾರ್ಗದ ಅನುಕರಣೆಯಲ್ಲಿ, ಸಾಮಾಜಿಕ ಸೇವೆಯ ಚಿಂತನೆಯಲ್ಲಿ ಹಾಗೂ ಮಾನವೀಯ ಮೌಲ್ಯಗಳ ಅಳವಡಿಕೆಯಲ್ಲಿ ಎಲ್ಲ ಧರ್ಮಗಳ ಆಚಾರ-ವಿಚಾರಗಳ ರಸತತ್ವದ ಅಡಿಯಲ್ಲಿ ವಿವಿಧ ರೀತಿಯ ಸೇವಾ ಕಾರ್ಯಗಳಲ್ಲಿ ತೊಡಗಿರುವ ಪೀರಸಾಬ ಕೌತಾಳರನ್ನು ನೋಡಿದಾಗ ಮಹರ್ಷಿ ವಾಲ್ಮೀಕಿ



ಅವರ ಜೀವನ ಯಶೋಗಾಥೆ ನೆನಪಾಗದೆ ಇರಲಾರದು.

**ರಾಜಕೀಯ ಜೀವನದಲ್ಲಿ ಸೋಲಿಲ್ಲದ ಪಯಣ:** ಕಿರಿಯ ವಯಸ್ಸಿನಲ್ಲಿ ಗದಗ ಬೆಟಗೇರಿ ನಗರಸಭೆಯ 17 ಮತ್ತು 18ನೇ ವಾರ್ಡ್‌ಗಳಿಂದ ಸತತವಾಗಿ ಗೆಲುವು ಸಾಧಿಸಿ, ಸೋಲಿಲ್ಲದ ಸರದಾರ ಎಂಬ ಪ್ರಶಂಸೆಗೆ ಪಾತ್ರರಾದ ಪೀರಸಾಬ ಕೌತಾಳರು ನಗರಸಭೆ ಅಧ್ಯಕ್ಷರಾಗಿ ಮಾಡಿದ ಸಾಧನೆ ಹಾಗೂ ಅವಳಿ ನಗರಕ್ಕೆ ನೀಡಿದ ಕೊಡುಗೆಗಳು ಇತಿಹಾಸದ ಪುಟಗಳಲ್ಲಿ ದಾಖಲಾಗುವಂತಿವೆ. ಇತರರಿಗೆ ಮಾದರಿಯಾಗಿರುವಂತಹ ಸೇವೆಯನ್ನು ಅವರು ಸಲ್ಲಿಸಿದ್ದಾರೆ.

ಇತ್ತೀಚೆಗೆ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಉಪಾಧ್ಯಕ್ಷರಾಗಿ ಆಡಳಿತ ನಡೆಸಿದ ಪೀರಸಾಬ ಕೌತಾಳರು ಸಂಸ್ಥೆಗೆ ಹೊಸ ದಾರಿ, ಹೊಸ ಬದುಕು ಕಟ್ಟಿಕೊಟ್ಟಿದ್ದು, ಅವರ ಕ್ರಿಯಾಶೀಲ ಆಡಳಿತಕ್ಕೆ ಹಿಡಿದ ಕೈಗನ್ನಡಿಯಾಗಿದೆ. ಎಲ್ಲ ಧರ್ಮಗಳ ಮೌಲ್ಯಯುತ ಸಾರಗಳಲ್ಲಿ ಸಾಗುತ್ತಾ ಮಾನವ ಧರ್ಮದ ನಡೆ-ನುಡಿ, ಸಾಮಾಜಿಕ, ಸಾಹಿತ್ಯಿಕ, ಸಂಗೀತ, ಸಾಂಸ್ಕೃತಿಕ, ಶೈಕ್ಷಣಿಕ, ರಾಜಕೀಯ ಹಾಗೂ ಧಾರ್ಮಿಕ ಸೇವೆಯಲ್ಲಿ ತೊಡಗಿಸಿಕೊಂಡಿರುವ ಪೀರಸಾಬ ಕೌತಾಳರು ಎಲ್ಲರ ಮನ ಗೆಲ್ಲುವಲ್ಲಿ ಯಶಸ್ವಿಯಾಗಿದ್ದಾರೆಂದರೆ ಅತಿಶಯೋಕ್ತಿ ಆಗಲಾರದು. ಹೃದಯವಂತಿಕೆ, ಗುಣವಂತಿಕೆ ಹಾಗೂ ಆತ್ಮೀಯ ಶ್ರೀಮಂತಿಕೆಯೊಂದಿಗೆ ಸಾಮಾಜಿಕ ಮತ್ತು ಸಾರ್ವತ್ರಿಕ ಸೇವಾ ಚಿಂತನೆಗಳಲ್ಲಿ ಭಕ್ತಿ ಮಾರ್ಗದ ನೆಲೆಯಲ್ಲಿ ಸಾಗುತ್ತಿರುವ ಪೀರಸಾಬ ಕೌತಾಳರಿಂದ ಇನ್ನಷ್ಟು ಸಮಾಜಮುಖಿ ಸೇವೆ ದೊರೆಯಲಿ ಎಂಬುದು ಅವರ ಅಭಿಮಾನಿಗಳ ಆಶಯ. ಸರ್ವಧರ್ಮ ಹಾಗೂ ಸರ್ವ ಕ್ಷೇತ್ರಗಳ ಸೇವಕರಾಗಿ, ಮಾನವೀಯ ಮೌಲ್ಯಗಳ ಹಿರಿಮೆ-ಗರಿಮೆಯಲ್ಲಿ ಭಕ್ತಿ ಪಂಥದ ನಡೆಯಲ್ಲಿ ಜೀವನ ರೂಪಿಸಿಕೊಂಡಿರುವ ಪೀರಸಾಬ ಕೌತಾಳರಿಗೆ ಡಾ. ಪಂಡಿತ ಪುಟ್ಟರಾಜರು ಅವರ ಕೃಪೆ ಸದಾ ಲಭಿಸಲಿ ಎಂಬುದು ಸರ್ವಧರ್ಮ ಚಿಂತಕರ ಹಾಗೂ ಪತ್ರಕರ್ತರಾದ ಆನಂದ ಸಾಲಿಗ್ರಾಮ ಸ್ನೇಹ ಬಳಗದ ಶುಭ ಹಾರೈಕೆ.



**- ಅನಂತ ಎಸ್. ಕಾರ್ಕಳ, ಪತ್ರಕರ್ತರು, ಗದಗ**

> **ಸಮಾಜಮುಖಿ ಸೇವೆಯ ವಿಶಾಲ ವ್ಯಾಪ್ತಿ**
>
> ಸಾಮೂಹಿಕ ವಿವಾಹಗಳ ಆಯೋಜನೆ, ಸಾಮಾಜಿಕ ಕಾರ್ಯಚಟುವಟಿಕೆಗಳು, ಶೈಕ್ಷಣಿಕ ಸಂಸ್ಥೆಗಳ ಅಭಿವೃದ್ಧಿ, ಶಿಕ್ಷಣ ಪ್ರಸಾರದ ಚಿಂತನೆ, ಸರ್ವಧರ್ಮ ಸಮನ್ವಯ ಸಾಧನೆ, ಕೈಗೊಂಡ ಕಾರ್ಯಯೋಜನೆಗಳು, ಸಾಮೂಹಿಕ ತತ್ವಾದರ್ಶಗಳ ನಡೆ-ನುಡಿ, ಧಾರ್ಮಿಕ ಅನುಷ್ಠಾನಗಳು ಸೇರಿದಂತೆ ಪ್ರತಿ ರಂಗದಲ್ಲಿಯೂ ಅವರು ತೊಡಗಿಸಿಕೊಂಡಿದ್ದಾರೆ. ಈ ಬದಲಾವಣೆಗಳಿಂದ ಇಂದು ಪೀರಸಾಬ ಕೌತಾಳರು ಎಲ್ಲರನ್ನು ಸೆಳೆಯುವ ವ್ಯಕ್ತಿತ್ವ ಹಾಗೂ ಶಕ್ತಿಯಾಗಿದ್ದಾರೆ. ಅಂಧ-ಅನಾಥ ಮಕ್ಕಳು, ದೀನ-ದಲಿತರು, ಬಡವರು ಹಾಗೂ ನಿರ್ಗತಿಕರ ಸೇವೆಯಲ್ಲಿ ತೊಡಗಿಸಿಕೊಂಡು ಡಾ. ಪಂಡಿತ ಪುಟ್ಟರಾಜರು ಅವರ ಪುಣ್ಯಾಶ್ರಮಕ್ಕೆ ಸಲ್ಲಿಸುತ್ತಿರುವ ಸೇವೆಯಿಂದ ಪೀರಸಾಬ ಕೌತಾಳರು ಮತ್ತು ಅವರ ಕುಟುಂಬ ಇನ್ನಷ್ಟು ಆದರ್ಶಪ್ರಾಯರಾಗಿದ್ದಾರೆ.

# ಸಾಂಪ್ರದಾಯಿಕ ಕಾಮದಹನಕ್ಕೆ ಸಿದ್ಧತೆ!



**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ರಾಮನಗರ ಸೇರಿದಂತೆ ವಿವಿಧ ಪ್ರದೇಶಗಳಲ್ಲಿ ಇಂದು ರಾತ್ರಿ 12 ಗಂಟೆಗೆ ಸಾಂಪ್ರದಾಯಿಕವಾಗಿ ಕಾಮದಹನ ಕಾರ್ಯಕ್ರಮ ಜರುಗಲಿದೆ.

ಪ್ರತಿ ವರ್ಷದಂತೆ ಈ ಬಾರಿಯೂ ರಾಮನಗರ ತೇರು ಬೀದಿಯಲ್ಲಿ ಕಾಮದಹನ ಆಚರಣೆ ಹಮ್ಮಿಕೊಳ್ಳಲಾಗಿದ್ದು, ಕಾರ್ಯಕ್ರಮದ ಬಳಿಕ ಉಪಹಾರದ ವ್ಯವಸ್ಥೆಯೂ ಇರಲಿದೆ ಎಂದು ರಾಮನಗರ ಹಿರಿಯರಾದ ನಾಣ್ಯಾಪುರ ಕೃಷ್ಣಮೂರ್ತಿ (ಧರ್ಮಕರ್ತರು), ಸಮಾಜಸೇವಕರಾದ ಸೆರಗಾರ್ ಹುಚ್ಚಪ್ಪ, ಕುಮಾರ್ ಇಂಜಿನಿಯರ್ ಗೆಳೆಯರ ಬಳಗ ಹಾಗೂ ರಾಮನಗರ ಸಹೋದರರು ತಿಳಿಸಿದ್ದಾರೆ.

ಮಂಗಳವಾರ ಬೆಳಿಗ್ಗೆ 8.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ಬಣ್ಣದ ಹೋಕುಳಿ ಕಾರ್ಯಕ್ರಮ ನಡೆಯಲಿದೆ.

ಇದಲ್ಲದೆ ಪಟ್ಟಣದ ಕೂಡ್ಲಿಗಿ ಸರ್ಕಲ್, ಬಸವೇಶ್ವರ ಬಜಾರ್, ಕೆ.ವಿ.ಒ.ಆರ್ ಕಾಲೋನಿ, ಹಳೆ ಹಗರಿಬೊಮ್ಮನಹಳ್ಳಿ ಸೇರಿದಂತೆ ಪಟ್ಟಣದ 23 ವಾರ್ಡುಗಳಲ್ಲಿ ಕಾಮದಹನದ ಬಳಿಕ ಬಣ್ಣದ ಹೋಕುಳಿ ಸಂಭ್ರಮಾಚರಣೆ ನಡೆಯಲಿದೆ ಎಂದು ತಿಳಿಸಲಾಗಿದೆ.

ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಂಪ್ರದಾಯವನ್ನು ಕಾಪಾಡುವಂತೆ ಆಯೋಜಕರು ಮನವಿ ಮಾಡಿದ್ದಾರೆ.

## ಲಿಂಗಾಯತ ಪ್ರಗತಿಶೀಲ ಸಂಘದ 2786ನೇ ಶಿವಾನುಭವದಲ್ಲಿ ಡಾ. ತೋಂಟದ ಸಿದ್ಧರಾಮ ಶ್ರೀಗಳು

# ಬಸವತತ್ವ ಪ್ರಸಾರಕ ಹರ್ಡೇಕರ್ ಮಂಜಪ್ಪನವರು



**■ವಿಜಯಸಾಕ್ಷಿ ಸುದ್ದಿ, ಗದಗ**

ಹರ್ಡೇಕರ ಮಂಜಪ್ಪನವರು ಸತ್ಯ, ಅಹಿಂಸೆ, ಮೌಲ್ಯಗಳನ್ನು ಅಳವಡಿಸಿಕೊಂಡು ಬದುಕಿದವರು. ಸ್ವಾತಂತ್ರ್ಯ ಹೋರಾಟಕ್ಕೆ ಮತ್ತು ಬಸವತತ್ವ ಪ್ರಸಾರಕ್ಕೆ ಹರ್ಡೇಕರ ಮಂಜಪ್ಪನವರ ಕೊಡುಗೆ ಬಹಳ ದೊಡ್ಡದು ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ತಿಳಿಸಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2786ನೇ ಶಿವಾನುಭವದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಶ್ರೀಗಳು, ಅಕ್ಷರ ಹಾಗೂ ಸಂಸ್ಕೃತಿಯ ಪ್ರತೀಕ ಹರ್ಡೇಕರ್ ಮಂಜಪ್ಪನವರು. ಪತ್ರಿಕೆಯ ಮೂಲಕ ಸ್ವಾತಂತ್ರ್ಯ ಮತ್ತು ಧರ್ಮ ಜಾಗೃತಿ ಕೆಲಸ ಮಾಡಿದ್ದಾರೆ. ಹಸ್ತ ನಿರ್ಮಿತ ಪತ್ರಿಕೆಗಳನ್ನು ಬರೆದು, ಸ್ವಾತಂತ್ರ್ಯ ಮತ್ತು ಧರ್ಮ ಜಾಗೃತಿಯ ವಿಷಯವನ್ನು ಪ್ರಚಾರ ಮಾಡುತ್ತಾ ಯುವಕರಲ್ಲಿ ಸ್ವಾತಂತ್ರ್ಯದ ಬಗ್ಗೆ, ಬಡತನದ ನಿರ್ಮೂಲನೆಯ ಬಗ್ಗೆ ಹೋರಾಡಿದರು ಮಕ್ಕಳ ಸಾಹಿತ್ಯವನ್ನು ಮೊಟ್ಟಮೊದಲು ಪ್ರಸ್ತುತಪಡಿಸಿದರು ಎಂದರು.

ಆಯುರ್ವೇದ ಚಿಕಿತ್ಸಾ ತಜ್ಞರಾದ ಡಾ. ಪರವೀನ್ ನದಾಫ್ ಮಾತನಾಡಿ, ದೈಹಿಕ, ಮಾನಸಿಕ ಸಮತೋಲನದ ಸ್ಥಿತಿಯೇ ಆಧ್ಯಾತ್ಮ. ಇಂದಿನ ಪರಿಸ್ಥಿತಿಯಲ್ಲಿ ಆರೋಗ್ಯ ಭಾಗ್ಯ ಮಹತ್ವದ್ದು. ಆರೋಗ್ಯವಂತ ವ್ಯಕ್ತಿಯೇ ಅತೀ ಶ್ರೀಮಂತ. ಆಹಾರವೇ ಔಷಧವಾಗಬೇಕು. ಆರೋಗ್ಯದ ಕಡೆಗೆ ಎಲ್ಲರೂ ಗಮನಹರಿಸಬೇಕು. ಉತ್ತಮ ಚಟುವಟಿಕೆಗಳನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು. ವಚನ ಸಂಗೀತ ಸೇವೆಯನ್ನು ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ನಡೆಸಿದರು. ಧಾರ್ಮಿಕ ಗ್ರಂಥ ಪಠಣವನ್ನು ಕೀರ್ತಿ ಹುಡೇದ ಹಾಗೂ ವಚನ ಚಿಂತನ ರತ್ನಾ ಪಾಟೀಲ ನಡೆಸಿಕೊಟ್ಟರು. ದಾಸೋಹ ಸೇವೆಯನ್ನು ಡಾ. ಎನ್.ಬಿ. ನಿಂಬಣ್ಣನವರ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಶ್ರೀ ತೋಂಟ-ದಾರ್ಯ ಜಾತ್ರಾ ಮಹೋತ್ಸವ ಸಮಿತಿ 2019 ಅವರು ವಹಿಸಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದ, ವಿದ್ಯಾ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮಶೇಖರ ಪುರಾಣಿಕ, ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಸಹ ಚೇರಮನ್ ಶಿವಾನಂದ ಹೊಂಬಳ ಹಾಗೂ ಮಠದ ಭಕ್ತರು ಉಪಸ್ಥಿತರಿದ್ದರು. ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ ಸ್ವಾಗತಿಸಿದರು. ವಿದ್ಯಾ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

> ಉಪನ್ಯಾಸಕರಾಗಿ ಆಗಮಿಸಿದ ಗದಗ ತಾಲೂಕಿನ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಪ್ರಕಾಶ ಅಸುಂಡಿ ಮಾತನಾಡಿ, 1913ರಲ್ಲಿ ಮೊಟ್ಟ ಮೊದಲು ಬಸವ ಜಯಂತಿಯನ್ನು ಆಚರಿಸಿದರು. ಅಂದಿನಿಂದ ಬಸವ ತತ್ವ ಪ್ರಸಾರ ನಾಡಿನ ಮಠ-ಮಾನ್ಯಗಳಲ್ಲಿ ಪ್ರಾರಂಭವಾಯಿತು. ನಾಡಿನ ಸೇವೆಗಾಗಿ ಮದುವೆಯಾಗದೇ ಸನ್ಯಾಸತ್ವ ಸ್ವೀಕರಿಸಿ, ಆಹಾರ, ಉಡುಗೆ-ತೊಡುಗೆಯಲ್ಲಿ ಬದಲಾವಣೆ ತಂದರು. ವಿಶ್ವವೇ ನನ್ನ ಕುಟುಂಬ ಎಂಬ ಭಾವನೆ ತಾಳಿದರು. ಗಾಂಧೀಜಿಯವರ ಪ್ರಭಾವದಿಂದ ಅವರಂತೆ ಬದುಕಿ ಬಾಳಿದರು ಎಂದರು.

## ಬಿ.ಎಂ.ಎಸ್ ಕಾಲೇಜು ಘಟಿಕೋತ್ಸವ

# ಹಗರಿಬೊಮ್ಮನಹಳ್ಳಿ ಸರ್ದಾರ್ ಅಜಯ್ ಕುಮಾರ್‌ಗೆ ಬಿಇ ಪದವಿ ಪ್ರದಾನ




**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ನಗರದ ಬಸವನಗುಡಿಯಲ್ಲಿ ಇರುವ ಬಿಎಂಎಸ್ ಕಾಲೇಜ್ ಆಫ್ ಇಂಜನಿಯರಿಂಗ್

ನಲ್ಲಿ ನಡೆದ 2026ನೇ ಸಾಲಿನ ಘಟಿಕೋತ್ಸವ ಕಾರ್ಯಕ್ರಮದಲ್ಲಿ ವಿಜಯನಗರ ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲೂಕಿನ ಪ್ರತಿಭಾವಂತ ವಿದ್ಯಾರ್ಥಿ ಸರ್ದಾರ್ ಅಜಯ್ ಕುಮಾರ್ ಅವರು ಬಿಇ (ಸಿವಿಲ್ ಇಂಜಿನಿಯರಿಂಗ್) ಪದವಿಯನ್ನು ಯಶಸ್ವಿಯಾಗಿ ಪಡೆದರು.

ಸರ್ದಾರ್ ಯಮನೂರಪ್ಪ ಹಾಗೂ ಸರ್ದಾರ್ ರಾಜೇಶ್ವರಿ ದಂಪತಿಗಳ ಹಿರಿಯ ಪುತ್ರರಾದ ಸರ್ದಾರ್ ಅಜಯ್ ಕುಮಾರ್ ಅವರು ತಮ್ಮ ವಿದ್ಯಾಭ್ಯಾಸದಲ್ಲಿ ಶ್ರಮ, ಶಿಸ್ತು ಮತ್ತು ಸಮರ್ಪಣೆಯೊಂದಿಗೆ ಉತ್ತಮ ಸಾಧನೆ ತೋರಿದ್ದಾರೆ. ಅವರ ಈ ಸಾಧನೆ ಕುಟುಂಬದವರಿಗೂ ಹಾಗೂ ಊರಿನವರಿಗೂ ಹೆಮ್ಮೆಯ ವಿಷಯವಾಗಿದೆ.

ಭವಿಷ್ಯದಲ್ಲಿ ಸಮರ್ಥ ಇಂಜಿನಿಯರ್ ಆಗಿ ಸ ವ ಾ ಜ ಸ ೇ ವ ೆ ಂ ು ಲ್ಲಿ ತೊಡಗಿಕೊಳ್ಳುವ ಸಂಕಲ್ಪ ವ್ಯಕ್ತಪಡಿಸಿದ ಅವರು, ತಮ್ಮ ಸಾಧನೆಗೆ ಬೆನ್ನೆಲುಬಾಗಿದ್ದ ಗುರುಗಳು ಮತ್ತು ಪೋಷಕರಿಗೆ ಕೃತಜ್ಞತೆ ಸಲ್ಲಿಸಿದರು.

ಅಂಬಿಗರ ಚೌಡಯ್ಯ ಗುರುಪೀಠದ ಪೀಠಾಧ್ಯಕ್ಷರಾದ ಶ್ರೀ ಶಾಂತ ಭೀಷ್ಮ ಚೌಡಯ್ಯ ಮಹಾಸ್ವಾಮಿಗಳು ಹಾವೇರಿ, ಶ್ರೀ ಡಾ.ಮಹೇಶ್ವರ ಮಹಾಸ್ವಾಮಿಗಳು, ಸುಕ್ಷೇತ್ರ ನಂದಿಪುರ, ಶ್ರೀ ಅಭಿನವ ಶಿವಲಿಂಗ ರುದ್ರಮುನಿ ಶಿವಾಚಾರ್ಯ ಮಹಾಸ್ವಾಮಿಗಳು, ಹಂಪಸಾಗರ. ಶ್ರೀ ಸಿದ್ದಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಕೊಟ್ಟೂರು, ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮಿಗಳು ಮರಿಯಮ್ಮನಹಳ್ಳಿ, ಶ್ರೀ ಶಿವಮಹಾಂತ ಮಹಾಸ್ವಾಮಿಗಳು ಬಾಚಿಗೊಂಡನಹಳ್ಳಿ, ಶ್ರೀ ಹಾಲಸಿದ್ದೇಶ್ವರ ಮಹಾಸ್ವಾಮಿಗಳು ಹಾಲಸ್ವಾಮಿ ಮಠ ಹಗರಿಬೊಮ್ಮನಹಳ್ಳಿ, ಶ್ರೀ ಬಸವ ಮಾಚಿದೇವ ಮಹಾಸ್ವಾಮಿಗಳು ಚಿತ್ರದುರ್ಗ, ಶ್ರೀ ನಿರಂಜನಪ್ರಭು ಮಹಾಸ್ವಾಮಿಗಳು ಗರಗ ನಾಗಲಾಪುರ, ಶ್ರೀ ಮರಿಶಾಂತವೀರ ಮಹಾಸ್ವಾಮಿಗಳು ಕಡಲಬಾಳು,

ಶ್ರೀ ಕೆ.ನೇಮಿರಾಜ ನಾಯ್ಕ ಶಾಸಕರು ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರ, ಹಾಗೂ ಮುಖಂಡರುಗಳು, ಕಾರ್ಯಕರ್ತರು,

ಪೂಜ ಗುರುಹಿರಿಯರು, ಗಂಗಾಮತ ಸಮಾಜದ ಗುರು ಹಿರಿಯರು ಸಮಸ್ತ ಬಾಂಧವರು ಹಾಗೂ ಆಪ್ತ ಸ್ನೇಹಿತರು, ಕುಟುಂಬ ವರ್ಗದವರು ಮತ್ತು ಬಂಧು ಮಿತ್ರರು ಶುಭಕೋರಿದರು.

## ಜಗದ್ಗುರು ಶ್ರೀ ರೇಣುಕಾಚಾರ್ಯ ಜಯಂತಿ ಆಚರಣೆಯಲ್ಲಿ ತಹಶೀಲ್ದಾರ್ ಅಮರೇಶ

# ಸಂದೇಶ ಅಳವಡಿಸಿಕೊಂಡರೆ ಜೀವನ ಸಾರ್ಥಕ

**■ವಿಜಯಸಾಕ್ಷಿ ಸುದ್ದಿ, ಕೊಟ್ಟೂರು**

ತಾಲೂಕು ಕಚೇರಿಯ ಮಹಾತ್ಮ ಗಾಂಧೀಜಿ ಸಭಾಂಗಣದಲ್ಲಿ ಸೋಮವಾರ ಜಗದ್ಗುರು ಶ್ರೀ ರೇಣುಕಾಚಾರ್ಯರ ಜಯಂತಿಯನ್ನು ಭಕ್ತಿಭಾವದಿಂದ ಆಚರಿಸಲಾಯಿತು. ತಹಶೀಲ್ದಾರ್ ಅಮರೇಶ್ ಜಿ.ಕೆ. ಹಾಗೂ ಪೂಜ್ಯರು ಶ್ರೀ ರೇಣುಕಾಚಾರ್ಯರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ತಹಶೀಲ್ದಾರ್ ಅಮರೇಶ್ ಜಿ.ಕೆ. ಮಾತನಾಡಿ, "ಆಯಾ ಕಾಲದಲ್ಲಿ ಅವತರಿಸಿದ ಮಹನೀಯರು ಮನುಕುಲದ ಏಳಿಗೆಗಾಗಿ ಶ್ರಮಿಸಿದ್ದಾರೆ. ಮನುಜರ ಉದ್ಧಾರಕ್ಕಾಗಿ ಮಾರ್ಗದರ್ಶನ ನೀಡಿ ಮಹಾತ್ಮರಾಗಿದ್ದಾರೆ. ಆ ಮಹನೀಯರ ಸಾಲಿನಲ್ಲಿ ಶ್ರೀ ರೇಣುಕಾಚಾರ್ಯರು ಮಹಾನ್ ಚೈತನ್ಯಗುರುವಾಗಿ ದಾ ರಿ ದೀ ಪ ರಾ ಗಿ ದ್ದಾ ರೆ. ಅವರ ಸಂದೇಶವನ್ನು ನಾವು ಅಳವಡಿಸಿಕೊಂಡಾಗ ಮಾತ್ರ ಜೀವನ ಸಾರ್ಥಕವಾಗುತ್ತದೆ," ಎಂದು ಹೇಳಿದರು.

ಬೆಣ್ಣಿಹಳ್ಳಿ ಹಿರೇಮಠದ ಪಂಚಾಕ್ಷರಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, "ಸಮಾನತೆಯನ್ನು ಸಾರಿದ ಜಗದ್ಗುರು ರೇಣುಕಾಚಾರ್ಯರು




ಸಿದ್ಧಾಂತ ಶಿಖಾಮಣಿ ಮೂಲಕ ಸಮಾಜಕ್ಕೆ ದಾರಿದೀಪವಾಗಿದ್ದಾರೆ. ಸಮಾಜದಲ್ಲಿ ಸಮಾನತೆ ಮತ್ತು ಸೌಹಾರ್ದತೆಯ ಮೌಲ್ಯಗಳನ್ನು ಬಿತ್ತಿದರು," ಎಂದರು.

ಸಾನ್ನಿಧ್ಯ ವಹಿಸಿದ್ದ ಕಟ್ಟಿಮನಿ ಹಿರೇಮಠದ ಶ್ರೀ ಯೋಗಿರಾಜೇಂದ್ರ ಶಿವಾಚಾರ್ಯ ಸ್ವಾಮಿಗಳು ಆಶೀರ್ವಚನ ನೀಡಿ, "ರೇಣುಕಾಚಾರ್ಯರು ಒಂದು ಧರ್ಮಕ್ಕೆ ಸೀಮಿತರಲ್ಲ. ಪ್ರತಿಯೊಬ್ಬ ಮನುಷ್ಯನಿಗೂ ಅರಿವಿನ ಬೆಳಕನ್ನು ನೀಡಿದ್ದಾರೆ. ಕಳ್ಳನನ್ನೂ ಋಷಿಯನ್ನಾಗಿ ಪರಿವರ್ತನೆ ಮಾಡಿದ ಮಹಾನ್ ಶಕ್ತಿ ಅವರದು. ಇಂದಿನ ಜಗತ್ತಿಗೆ ಅತ್ಯವಶ್ಯಕವಾದ ಶಾಂತಿಯನ್ನು ಬೋಧಿಸಿದವರು ಅವರು. ಭಿಕ್ಷೆಯ ಪಾತ್ರೆಯ ಬದಲು ಅಕ್ಷಯ ಪಾತ್ರೆಯನ್ನು ನೀಡಿ ಸಮಾಜದ ಪರಿವರ್ತನೆಗೆ ಕಾರಣರಾದರು. ಅವರು ನೀಡಿದ ಸಿದ್ಧಾಂತ ಶಿಖಾಮಣಿಯ ಅರಿವಿನ ಬೆಳಕಿನಲ್ಲಿ ನಾವೆಲ್ಲರೂ ನಡೆಯಬೇಕು," ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತಾಲೂಕು ಜಂಗಮ ಸಮಾಜದ ಅಧ್ಯಕ್ಷರಾದ ಅಡಿಕಿ ಮಂಜುನಾಥ, ಅಯ್ಯನಹಳ್ಳಿ ಕೊಟ್ರಯ್ಯ, ಎಂ.ಎಂ.ಜೆ ಮೂಗಣ್ಣ, ಕೆ.ಎಂ ಮಲ್ಲಿಕಾರ್ಜುನ, ಅಟವಾಳಿಗೆ ಭೋಜರಾಜ, ಶಿರಸ್ತೇದಾರ ಅನ್ನದಾನೇಶ ಬಿ. ಪತ್ತಾರ್, ಚಂದ್ರನಾಯ್ಕ, ಕಂದಾಯ ನಿರೀಕ್ಷಕ ಡಿ. ಶಿವಕುಮಾರ, ಗ್ರಾಮ ಆಡಳಿತಾಧಿಕಾರಿ ಹರೀಶ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಪಿ.ಎಂ ಈಶ್ವರಯ್ಯ ಸ್ವಾಗತಿಸಿದರು. ಸಿ.ಎಂ ಗುರುಬಸವರಾಜ ಕಾರ್ಯಕ್ರಮವನ್ನು ನಿರೂಪಿಸಿದರು. ಜಂಗಮ ಮಹಿಳಾ ಘಟಕದ ವತಿಯಿಂದ ವಚನ ಗಾಯನ ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿತ್ತು.

ಈ ಸಂದರ್ಭದಲ್ಲಿ ಅಟವಾಳಿಗಿ ಪಾರ್ವತಿ, ಎಂ.ಎಂ.ಜೆ ಕಾವ್ಯ, ದೇವರಮನಿ ಕೊಟ್ರೇಶ್, ನೀಲಕಂಠಯ್ಯ ಟಿ., ಗುರುಶಾಂತಪ್ಪ ಎಸ್., ಅಟವಾಳಿಗಿ ಸಂತೋಷ, ಡಿಶ್ ಮಂಜುನಾಥ ಹಾಗೂ ಅಡಿಕಿ ಮಂಜುನಾಥ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

# ಶಾಂತಿ-ಸೌಹಾರ್ದತೆಯಿಂದ ಹೋಳಿ ಆಚರಿಸಿ: ಸಿಪಿಐ ವಿಕಾಸ್ ಲಮಾಣಿ ಕರೆ



**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದಲ್ಲಿ ಪ್ರತಿವರ್ಷವೂ ಆಚರಿಸಲಾಗುವ ಹೋಳಿ ಹಬ್ಬವನ್ನು ಈ ವರ್ಷವೂ ಶಾಂತಿ ಮತ್ತು ಸೌಹಾರ್ದತೆಯಿಂದ ಆಚರಿಸುವಂತೆ ವೃತ್ತ ಪೊಲೀಸ್ ನಿರೀಕ್ಷಕ ವಿಕಾಸ್ ಲಮಾಣಿ ಸಾರ್ವಜನಿಕರಿಗೆ ಮನವಿ ಮಾಡಿದ್ದಾರೆ.

ಪಟ್ಟಣದಲ್ಲಿ ಆಯೋಜಿಸಿದ್ದ ಶಾಂತಿ ಸಭೆಯಲ್ಲಿ ಮಾತನಾಡಿದ ಅವರು, "ಇಲ್ಲಿನ ಪ್ರಜ್ಞಾವಂತ ನಾಗರಿಕರು ಹೋಳಿ ಹಬ್ಬವನ್ನು ಸದಾ ಶಿಸ್ತು ಮತ್ತು ಸಂಯಮದಿಂದ ಆಚರಿಸುತ್ತಿದ್ದಾರೆ. ಕಳೆದ 8-9 ವರ್ಷಗಳಿಂದ ನಡೆಯುತ್ತಿರುವ 'ಕಲರ್ಸ್ ವಿತ್ ಕಾರಂಜಿ' ಕಾರ್ಯಕ್ರಮವೂ ಜನಪ್ರಿಯತೆ ಗಳಿಸಿದೆ. ಇದೇ ರೀತಿಯ ಸಡಗರ-ಸಂಭ್ರಮದ ನಡುವೆ ಶಾಂತಿ ಕಾಪಾಡಿಕೊಳ್ಳಬೇಕು," ಎಂದು ಹೇಳಿದರು.

ಪಿಎಸ್‌ಐ ಬಸವರಾಜ್ ಅಡವಿಬಾವಿ ಮಾತನಾಡಿ, "ಹೋಳಿ ಹಬ್ಬದ ವೇಳೆ ಬಣ್ಣದ ಆಟವಾಡುವಾಗ ಮೊಟ್ಟೆ, ಗ್ರೀಸ್, ಕೀಲೆಣ್ಣೆ ಮುಂತಾದ ಚರ್ಮಕ್ಕೆ ಹಾನಿಕಾರಕ ವಸ್ತುಗಳನ್ನು ಬಳಸದಿರಿ. ಇದು ನಾಗರಿಕ ವರ್ತನೆಗೆ ವಿರುದ್ಧ. ಸ್ನೇಹ ಮತ್ತು ಸೌಹಾರ್ದತೆಯಿಂದ ಹಬ್ಬವನ್ನು ಆಚರಿಸಬೇಕು. ಹಬ್ಬದ ಸಂದರ್ಭದಲ್ಲಿ ಪೊಲೀಸರು ಕಣ್ಗಾವಲು ವಹಿಸಿಕೊಂಡಿರುತ್ತಾರೆ," ಎಂದು ಎಚ್ಚರಿಸಿದರು.

ಸಭೆಯಲ್ಲಿ ಕಾಂಗ್ರೆಸ್ ಮುಖಂಡರಾದ ಸೆರೆಗಾರ್ ಹುಚ್ಚಪ್ಪ, ಗುರುಬಸವರಾಜ ಸೊನ್ನದ, ಹಳೇವೂರು ನಿಂಬಪ್ಪ, ಹಿರಿಯ ಪತ್ರಕರ್ತ ಹುಳ್ಳಿ ಪ್ರಕಾಶ್ ಸೇರಿದಂತೆ ಹಲವರು ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ಚಿಂತರಪಳ್ಳಿ ದೇವೇಂದ್ರಪ್ಪ, ಬಾಪೂಜಿ, ವಿಜಯ್ ಕುಮಾರ್, ಧರ್ಮಕರ್ತ ನಾಣ್ಯಾಪುರ ಕೃಷ್ಣಮೂರ್ತಿ ಸೇರಿದಂತೆ ಅನೇಕ ಗಣ್ಯರು ಹಾಗೂ ನಾಗರಿಕರು ಭಾಗವಹಿಸಿದ್ದರು.

ಸಿಬ್ಬಂದಿಗಳಾದ ಮಲ್ಲೇಶ್ ನಾಯ್ಕ, ದಶರಥ್, ಎಸ್.ಬಿ. ಹನುಮಂತು, ಸಿದ್ದೇಶ್ ಸೇರಿದಂತೆ ಇತರರು ಹಾಜರಿದ್ದರು.

# ಜಾತ್ಯತೀತ ಜನತಾದಳಕ್ಕೆ 25 ವರ್ಷ: ಚರಿತ್ರಾರ್ಹ ಸಾಧನೆ – ನಿಖಿಲ್ ಕುಮಾರಸ್ವಾಮಿ



**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದಲ್ಲಿ ನಡೆದ ಜಾತ್ಯತೀತ ಜನತಾದಳದ ಬೆಳ್ಳಿಹಬ್ಬ ಹಾಗೂ ವಿಜಯನಗರ ನೂತನ ಜಿಲ್ಲಾಧ್ಯಕ್ಷರ ಪದಗ್ರಹಣ ಸಮಾರಂಭದಲ್ಲಿ ಪಕ್ಷದ ರಾಜ್ಯ ಯುವಜನತಾದಳದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ಮಾತನಾಡಿ, ಪ್ರಾದೇಶಿಕ ಪಕ್ಷವಾದ ಜಾತ್ಯತೀತ ಜನತಾದಳ 25 ವರ್ಷ ಪೂರೈಸಿರುವುದು ಚರಿತ್ರಾರ್ಹ ಘಟನೆ ಎಂದರು.

1983ರಲ್ಲಿ ಕೇವಲ ಎರಡು ಸ್ಥಾನಗಳಿಂದ ವಿಧಾನಸಭೆ ಪ್ರವೇಶಿಸಿದ್ದ ಜನತಾದಳ, ನಂತರ ಪ್ರಭಾವಿ ಶಕ್ತಿಯಾಗಿ ಬೆಳೆಯಿತು. ಅದೇ ಪಕ್ಷದಿಂದ ಎಚ್.ಡಿ. ದೇವೇಗೌಡ ದೇಶದ ಪ್ರಧಾನಿಯಾಗಿದ್ದು, ಎಚ್.ಡಿ. ಕುಮಾರಸ್ವಾಮಿ ರಾಜ್ಯದ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ್ದು ಪಕ್ಷದ ಇತಿಹಾಸದಲ್ಲಿ ಮಹತ್ವದ ಮೈಲುಗಲ್ಲುಗಳಾಗಿವೆ ಎಂದು ಅವರು ಹೇಳಿದರು.

ಪಟ್ಟಣದ ಯು.ಕೆ. ಕೊಟ್ರಬಸಪ್ಪ ಅವರ ಬಯಲು ಜಾಗದಲ್ಲಿ ನಡೆದ ಸಮಾರಂಭದಲ್ಲಿ ಮಾತನಾಡಿದ ಅವರು, ರಾಜ್ಯದ ಆಡಳಿತ ಪಕ್ಷ ಗ್ಯಾರಂಟಿ ಯೋಜನೆಗಳ ಭ್ರಮೆಯಲ್ಲಿ ಕೆಲಸ ಮಾಡುತ್ತಿದೆ. ತನ್ನ ವೈಫಲ್ಯಗಳನ್ನು ಕೇಂದ್ರ ಸರ್ಕಾರದ ಮೇಲೆ ಹೊರೆ ಹಾಕುತ್ತಿದೆ ಎಂದು ಕಾಂಗ್ರೆಸ್ ಸರ್ಕಾರದ ವಿರುದ್ಧ ಟೀಕಿಸಿದರು. ಜನತಾದಳ ಪಕ್ಷ ರಾಜ್ಯದ ಜನರ ಹೃದಯದಲ್ಲಿ ಸದಾ ನೆಲೆಗೊಂಡಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಮಾಜಿ ಸಚಿವ ವೆಂಕಟರಾವ್ ನಾಡಗೌಡ ಮಾತನಾಡಿ, ರೈತರ ಪರ ನಿಂತ ಪಕ್ಷವೆಂದರೆ ಅದು ಕುಮಾರಸ್ವಾಮಿ ಅವರ ಜಾತ್ಯತೀತ ಜನತಾದಳವೇ. ಗ್ರಾಮ ವಾಸ್ತವ್ಯದ ಪರಿಕಲ್ಪನೆಯನ್ನು ಜಗತ್ತಿಗೆ ಪರಿಚಯಿಸಿದ ಪಕ್ಷವೂ ದೇವೇಗೌಡರ ಜನತಾದಳವೇ ಎಂದು ಪ್ರಶಂಸಿಸಿದರು.

ಶಾಸಕ ನೇಮಿರಾಜ್ ನಾಯ್ಕ ಮಾತನಾಡಿ, 2023ರಲ್ಲಿ ನಿಮ್ಮ ಮತಭಿಕ್ಷೆಯಿಂದ ಗೆಲುವು ಸಾಧಿಸಿದ್ದೇನೆ. 2028ರ ವಿಧಾನಸಭಾ ಚುನಾವಣೆಯಲ್ಲಿ ಜಾತ್ಯತೀತ ಜನತಾದಳವನ್ನು ಬಹುಮತದೊಂದಿಗೆ ಗೆಲ್ಲಿಸಿ ಕುಮಾರಸ್ವಾಮಿ ಅವರನ್ನು ಮತ್ತೆ ಮುಖ್ಯಮಂತ್ರಿಯಾಗಿ ಮಾಡುವ ವಿಶ್ವಾಸವಿದೆ ಎಂದರು.

ಹರಿಹರದ ಮಾಜಿ ಶಾಸಕ ಹೆಚ್.ಎಸ್. ಶಿವಶಂಕರ್ ಮಾತನಾಡಿ, ಶಾಸಕ ನೇಮಿರಾಜ್ ನಾಯ್ಕ ಹಾಗೂ ನೂತನ ಜಿಲ್ಲಾಧ್ಯಕ್ಷ ಬದಾಮಿ ಮೃತ್ಯುಂಜಯ ಅವರ ನೇತೃತ್ವದಲ್ಲಿ ಪಕ್ಷ ಇನ್ನಷ್ಟು ಬಲಗೊಳ್ಳಲಿ ಎಂದು ಆಶಿಸಿದರು.

ಪ್ರಾಸ್ತಾವಿಕ ಭಾಷಣ ಮಾಡಿದ ನೂತನ ಜಿಲ್ಲಾಧ್ಯಕ್ಷ ಬದಾಮಿ ಮೃತ್ಯುಂಜಯ, ದೇವೇಗೌಡ ಹಾಗೂ ಕುಮಾರಸ್ವಾಮಿ ಅವರು ಪಕ್ಷವನ್ನು ಕಟ್ಟಿಬೆಳೆಸಿದ ಪರಿಯನ್ನು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಸಾವಿರಾರು ಕಾರ್ಯಕರ್ತರು ಭಾಗವಹಿಸಿದ್ದರು. ಪಟ್ಟಣದ ಮಿನಿ ವಿಧಾನಸೌಧದಿಂದ ಲಾರಿಯಲ್ಲಿ ನಿಖಿಲ್ ಕುಮಾರಸ್ವಾಮಿ, ಶಾಸಕ ನೇಮಿರಾಜ್ ನಾಯ್ಕ, ಮಾಜಿ ಶಾಸಕ ಅನಿಲ್ ಲಾಡ್ ಸೇರಿದಂತೆ ಹಲವು ಮುಖಂಡರು ಮೆರವಣಿಗೆಯಲ್ಲಿ ಪಾಲ್ಗೊಂಡರು. ಸುಮಾರು 500 ಆಟೋಗಳು, 300 ಬೈಕ್‌ಗಳು ಹಾಗೂ ಸಾವಿರಾರು ಕಾರ್ಯಕರ್ತರು ಭಾಗವಹಿಸಿದ್ದರು.

ವೇದಿಕೆಯಲ್ಲಿ ಮೀನಳ್ಳಿ ತಾಯಣ್ಣ, ರಾರಾಳ್ ಶೇಖರಪ್ಪ, ಕ್ಷೇತ್ರದ ಅಧ್ಯಕ್ಷ ವೈ. ಮಲ್ಲಿಕಾರ್ಜುನ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಶಿವಶಂಕರ್ ಹಾಗೂ ಕನ್ನಿಹಳ್ಳಿ ಚಂದ್ರಶೇಖರ್ ನಿರೂಪಿಸಿದರು.

> ಮಾಜಿ ಪ್ರಧಾನಿ ದೇವೇಗೌಡರು ಉತ್ತರ ಕರ್ನಾಟಕದಲ್ಲಿ ಕೃಷ್ಣ ಮೇಲ್ದಂಡೆ ಹಂತ 1 ಮತ್ತು 2 ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ನೀರಿನ ಮಹತ್ವವನ್ನು ತೋರಿಸಿದರು. ಬಳಿಕ ಕುಮಾರಸ್ವಾಮಿ ಅವರು ಸುಮಾರು 25 ಸಾವಿರ ಕೋಟಿ ರೂಪಾಯಿಗಳ ರೈತರ ಸಾಲಮನ್ನಾ ಮೂಲಕ ಜನಮನ ಗೆದ್ದರು.
>
> – **ನಿಖಿಲ್ ಕುಮಾರಸ್ವಾಮಿ,** ಯುವ ಘಟಕದ ಅಧ್ಯಕ್ಷರು.

## ವಿದ್ಯಾರ್ಥಿ ವೇತನ ಕೋರಿ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳ ಗಮನಕ್ಕೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಅನುಷ್ಠಾನಗೊಳ್ಳುತ್ತಿರುವ ಮೆಟ್ರಿಕ್ ಪೂರ್ವ (9 ಮತ್ತು 10ನೇ ತರಗತಿ) ಹಾಗೂ ಮೆಟ್ರಿಕ್ ನಂತರದ ಪರಿಶಿಷ್ಟ ಜಾತಿ (ಎಸ್‌ಸಿ) ವಿದ್ಯಾರ್ಥಿ ವೇತನ ಯೋಜನೆಯಡಿ ಅರ್ಜಿ ಸಲ್ಲಿಸಿರುವ ಎಲ್ಲಾ ವಿದ್ಯಾರ್ಥಿಗಳು ಕಡ್ಡಾಯವಾಗಿ ಆಧಾರ್ ಆಧಾರಿತ ಬಯೋಮೆಟ್ರಿಕ್ ಇ-ಆಥೆಂಟಿಕೇಷನ್ ಪ್ರಕ್ರಿಯೆಗೆ ಒಳಪಡುವುದು ಅಗತ್ಯವಾಗಿದೆ.

ಮೆಟ್ರಿಕ್ ಪೂರ್ವ 9 ಮತ್ತು 10ನೇ ತರಗತಿ ಎಸ್‌ಸಿ ವಿದ್ಯಾರ್ಥಿಗಳು, ಮೆಟ್ರಿಕ್ ನಂತರದ ಎಸ್‌ಸಿ ವಿದ್ಯಾರ್ಥಿಗಳು ತಮ್ಮ ಆಧಾರ್ ಕಾರ್ಡ್ ಸಹಿತ ಕೆಳಕಂಡ ಕೇಂದ್ರಗಳಿಗೆ ಭೇಟಿ ನೀಡಿ ಬಯೋಮೆಟ್ರಿಕ್ ಇ-ಆಥೆಂಟಿಕೇಷನ್ ಮಾಡಿಸಬೇಕು.

ಕರ್ನಾಟಕ ಒನ್ ಕೇಂದ್ರ, ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಕಚೇರಿ, ಎಸ್‌ಪಿ ಆಫೀಸ್ ಎದುರು, ಹೊಸ ಬಸ್ ನಿಲ್ದಾಣ ಹಿಂಭಾಗ, ಗದಗ ವಿದ್ಯಾರ್ಥಿಗಳು NSP OTR (One Time Registration) ಪ್ರಕ್ರಿಯೆಯನ್ನೂ ಪೂರ್ಣಗೊಳಿಸಬೇಕು. ಇದಕ್ಕಾಗಿ ಮೊಬೈಲ್‌ನಲ್ಲಿ NSP OTR App ಡೌನ್‌ಲೋಡ್ ಮಾಡಿಕೊಂಡು, Aadhaar Face Authentication Rಆ ಮೂಲಕ ನೋಂದಣಿ ಮಾಡಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ: ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಎಸ್‌ಪಿ ಆಫೀಸ್ ಎದುರು, ಹೊಸ ಬಸ್ ನಿಲ್ದಾಣ ಹಿಂಭಾಗ, ಗದಗ ದೂರವಾಣಿ: 08372-297258 ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನ ಪಡೆಯಲು ಅಗತ್ಯ ಪ್ರಕ್ರಿಯೆಗಳನ್ನು ಶೀಘ್ರದಲ್ಲೇ ಪೂರ್ಣಗೊಳಿಸುವಂತೆ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

### ಶಿರಹಟ್ಟಿಯಲ್ಲಿ ಹುಲ್ಲಿನಿಂದ ತಯಾರಿಸಿದ ಬೃಹತ್ ಹುಲ್ಲುಗಾಮನ ಭವ್ಯ ಮೆರವಣಿಗೆ

# ಪ್ರಮುಖ ಬೀದಿಗಳಲ್ಲಿ ಹಲಗೆ ಅಬ್ಬರ

■ **ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಪಟ್ಟಣದಲ್ಲಿ ಈ ಹಿಂದಿನಿಂದಲೂ ಸಂಪ್ರದಾಯದಂತೆ ವಿಶೇಷವಾಗಿ ಹುಲ್ಲಿನಿಂದ ತಯಾರಿಸಿದ ಬೃಹತ್ ಹುಲ್ಲುಗಾಮನ ಮೆರವಣಿಗೆಯು ನಡೆಯುತ್ತಾ ಬಂದಿದ್ದು, ಇದೀಗ ಹೋಳಿ ಹಬ್ಬದ ಪ್ರಯುಕ್ತ ಹುಣ್ಣಿಮೆಯ ದಿನವಾದ ಮಾ. 3ರ ಮಂಗಳವಾರ ರಾತ್ರಿ 10 ಗಂಟೆಯಿಂದ ಮಾ. 4ರ ಬುಧವಾರ ಬೆಳಗಿನ ಜಾವದವರೆಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಹುಲ್ಲುಗಾಮನ ಬೃಹತ್ ಮೆರವಣಿಗೆಯು ಅಹೋರಾತ್ರಿ ನಡೆಯಲಿದೆ.



ಮಂಗಳವಾರ ರಾತ್ರಿ 10 ಗಂಟೆ ಸುಮಾರಿಗೆ ಪಟ್ಟಣದ ಶ್ರೀ ಮಹರ್ಷಿ ವಾಲ್ಮೀಕಿ ವೃತ್ತದಿಂದ ವಿಶೇಷವಾಗಿ ತಯಾರಿಸಿದ ಹುಲ್ಲುಗಾಮನ ಮೆರವಣಿಗೆಯು ಪ್ರಾರಂಭವಾಗಲಿದ್ದು, ಕಾಮನ ಮೂರ್ತಿಗೆ ವಿಶೇಷ ಅಲಂಕಾರ ಮತ್ತು ವೇಷಭೂಷಣಗಳನ್ನು ತೊಡಿಸಲಾಗುತ್ತದೆ. ಅಲಂಕೃತ ಎತ್ತುಗಳ ಬಂಡಿಯನ್ನು ಹಸಿರು ತೋರಣಗಳಿಂದ ಸಿಂಗರಿಸಿದ ಹುಲ್ಲುಗಾಮನ ಅದ್ದೂರಿ ಮೆರವಣಿಗೆ ನಡೆಯಲಿದ್ದು, ನಂತರ ಬಡಿಗೇರ ಓಣಿ, ಡಬಾಲಿ ಓಣಿ, ಕೆಳಗೇರಿ ಓಣಿ, ಶೆಟ್ಟರ ಓಣಿ ಸೇರಿದಂತೆ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಬುಧವಾರ ಬೆಳಗಿನ ಜಾವ ಮತ್ತೆ ವಾಲ್ಮೀಕಿ ವೃತ್ತದಲ್ಲೇ ಕಾಮದಹನ ಮಾಡುವುದರ ಮೂಲಕ ಓಕುಳಿಯ ಮೆರವಣಿಗೆಯೂ ಇದೇ ವೃತ್ತದಿಂದ ಬೆಳಿಗ್ಗೆ 10 ಗಂಟೆ ನಂತರ ಪ್ರಾರಂಭವಾಗಲಿದೆ.

ಬೃಹತ್ ಮೆರವಣಿಗೆಯುದ್ದಕ್ಕೂ ಸಾವಿರಾರು ಸಂಖ್ಯೆಯಲ್ಲಿ ಯುವಕರು ಭಾಗಿಯಾಗಿ ಕಿವಿಗಡಚಿಕ್ಕುವ ರೀತಿಯಲ್ಲಿ ಹಲಗೆಗಳ ಸದ್ದು ಮಾಡುತ್ತಾರೆ. ಯಾರು ಎಷ್ಟೇ ಹೇಳಿದರೂ ತಮಗೆ ಸಾಕಾಗುವವರೆಗೂ ಹಲಗೆಯನ್ನು ಬಾರಿಸುವುದನ್ನು ನಿಲ್ಲಿಸುವದಿಲ್ಲ. ಯುವಕರು ಸಹ ಹಲವು ವೇಷ-ಭೂಷಣಗಳನ್ನು ಧರಿಸಿ ಮೆರವಣಿಗೆಯ ಆಕರ್ಷಣೆಯಾಗುತ್ತಾರೆ. ಮೆರವಣಿಗೆಯಲ್ಲಿ ಅಪಾರ ಸಂಖ್ಯೆಯ ಜನತೆಯು ಸಹ ಭಾಗಿಯಾಗಲಿದ್ದಾರೆ. ಅಹಿತಕರ ಘಟನೆಗಳು ಜರುಗದಂತೆ ಪಟ್ಟಣದ ಪ್ರಮುಖ ಮುಖಂಡರು ಸಹ ಭಾಗಿಯಾಗಿ ಮೆರವಣಿಗೆಯನ್ನು ಯಶಸ್ವಿಗೊಳಿಸುತ್ತಾ ಬಂದಿದ್ದಾರೆ.

ಬುಧವಾರ ಬೆಳಗಿನ ಜಾವ ಕಾಮದಹನದ ನಂತರ ಓಕುಳಿ ಪ್ರಾರಂಭವಾಗಲಿದ್ದು, ಪುನಃ ಶ್ರೀ ಮಹರ್ಷಿ ವಾಲ್ಮೀಕಿ ವೃತ್ತದಿಂದ ಎತ್ತುಗಳೊಂದಿಗೆ ಓಕುಳಿ ಬಂಡಿಯ ಮೆರವಣಿಗೆಯು ಸಂಚರಿಸಲಿದೆ.. ಈ ಮೆರವಣಿಗೆಯಲ್ಲಿಯೂ ಸಹ ಹಲಗೆಗಳ ನಿನಾದಕ್ಕೆ ಕೊರತೆಯಾಗದು! ಯುವಕರು ತಮ್ಮ ತಮ್ಮ ಸ್ನೇಹಿತರಿಗೆ ಪರಸ್ಪರ ಬಣ್ಣ ಎರಚುವುದರ ಮೂಲಕ ಬೆಳಗಿನ ಜಾವ 4 ಗಂಟೆಯವರೆಗೂ ಮೆರವಣಿಗೆ ನಡೆಸಲಿದ್ದಾರೆ.

> ಈ ಕುರಿತು ಪ್ರತಿಕ್ರಿಯಿಸಿದ ಗದಗ ಡಿಎಸ್‌ಪಿ ಮುರ್ತುಜಾ ಖಾದ್ರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ನಿರ್ದೇಶನದ ಮೇರೆಗೆ ಹೋಳಿ ಹಬ್ಬದ ಪ್ರಯುಕ್ತ ನಡೆಯುವ ಮೆರವಣಿಗೆಗೆ ಮುಂಜಾಗೃತಾ ಕ್ರಮವಾಗಿ ಅಗತ್ಯ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ. ಸಾರ್ವಜನಿಕರಿಗೆ ತೊಂದರೆಯಾಗದಂತೆ ಶಾಂತಿ ಮತ್ತು ಸುವ್ಯವಸ್ಥೆಯಿಂದ ಎಲ್ಲರೂ ಹಬ್ಬವನ್ನು ಆಚರಿಸಬೇಕೆಂದು ಹೇಳಿದರು.

## ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಹೆಚ್ಚಿನ ಆದ್ಯತೆ

▶▶ಮೊದಲನೇ ಪುಟದಿಂದ

ಶಿಕ್ಷಣ ಕ್ಷೇತ್ರಕ್ಕೆ ವಿಶೇಷ ಒತ್ತು ನೀಡುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮುಖಂಡ ವೀರಯ್ಯ ಸೋಮನಕಟ್ಟಿಮಠ, ಇಒ ವಿಶ್ವನಾಥ ಹೊಸಮನಿ, ಮುಂಡರಗಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಡಿ.ಡಿ. ಮೋರನಾಳ, ಮುಖಂಡರಾದ ಅಬ್ದುಲ ಕಲಕೇರಿ, ಹಾಲಪ್ಪ ಕಬ್ಬೇರಳ್ಳಿ, ಎಸ್‌ಡಿಎಮ್‌ಸಿ ಅಧ್ಯಕ್ಷ ಅಶೋಕ ಕಬ್ಬೇರಳ್ಳಿ, ಯಲ್ಲಪ್ಪ ಕರಮುಡಿ, ಭೀಮರಡ್ಡಿ ಪಾಟೀಲ, ಹೇಮಣ್ಣ ಪೂಜಾರ, ರವಿ ದೊಡ್ಡಮನಿ, ಪುಲಕೇಶಗೌಡ, ಭುವನೇಶ್ವರಿ ಕಲ್ಲಕುಟಿಗರ, ಶರಣಪ್ಪ ಶಿರುಂದ, ಬಸವರಡ್ಡಿ ಬಂಡಿಹಾಳ, ಬಶೀರ ಹಾರೂಗೇರಿ, ಬಸುರಾಜ ಶಿರೋಳ, ಹನಮಂತಪ್ಪ ಹೊಸಮನಿ, ಶಿಕ್ಷಕ ವಿಶ್ವನಾಥ ಪಾಟೀಲ, ಪ್ರಥಮ ದರ್ಜೆ ಗುತ್ತಿಗೆದಾರ ಪಾಲಾಕ್ಷಿಗೌಡ ಪಾಟೀಲ, ಕಂದಾಯ ನಿರೀಕ್ಷಕ ಪ್ರಭು ಬಾಗಲಿ, ಪಿಡಬ್ಲುಡಿ ಅಧಿಕಾರಿ ನಾಗೇಂದ್ರ ಪಟ್ಟಣಶೆಟ್ಟರ, ಪಿಡಿಒಗಳು, ಎಸ್.ಡಿ.ಎಮ್.ಸಿ ಸದಸ್ಯರು, ಗ್ರಾಮಸ್ಥರು ಇದ್ದರು. ಎಮ್.ಎಮ್. ಬಂಡಿ ನಿರೂಪಿಸಿ ವಂದಿಸಿದರು.

## ರಂಗೇರುತ್ತಿರುವ ಹೋಳಿ ಹಬ್ಬ; ಹಲಗೆ ಸದ್ದು ಜೋರು!

■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಹೋಳಿ ಹಬ್ಬದ ಸಂಭ್ರಮ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಓಣಿ ಓಣಿಗಳಲ್ಲಿ ಹಲಗೆ ಸದ್ದು ಜೋರಾಗಿ ಮೊಳಗುತ್ತಿದೆ. ಹಬ್ಬ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಬಾಲಕರು, ಯುವಕರು ಗುಂಪುಗಳಾಗಿ ಸೇರಿ ಹಲಗೆ ಬಾರಿಸುತ್ತ ಸಂಭ್ರಮಾಚರಣೆ ನಡೆಸುತ್ತಿದ್ದಾರೆ.

ಹೋಳಿ ಹಬ್ಬವನ್ನು ಮುಖ್ಯವಾಗಿ ಗಂಡಸರ ಹಬ್ಬವೆಂದು ಪರಿಗಣಿಸಲಾಗುತ್ತದೆ. ಕಾಮನನ್ನು ಸುಡುವ ಸಂಪ್ರದಾಯದೊಂದಿಗೆ ಬಣ್ಣ ಆಡಿ ಹರ್ಷಿಸುವುದು ಈ ಹಬ್ಬದ ವಿಶೇಷ. ಬಣ್ಣವಾಡಿ ಮನೆಗೆ ಮರಳಿದವರಿಗೆ ಮಹಿಳೆಯರು ಮನೆಯಲ್ಲಿ ತಯಾರಿಸಿದ ಹೋಳಿಗೆಗಳನ್ನು ಬಡಿಸಿ ಆತಿಥ್ಯ ನೀಡುವುದು ಸಂಪ್ರದಾಯವಾಗಿದೆ. ಹೀಗಾಗಿ ಮನೆಮನೆಗಳಲ್ಲಿ ಈಗಲೇ ಹೋಳಿಗೆ ಸಿದ್ಧತೆ ಜೋರಾಗಿದೆ.



ಹಬ್ಬದ ಸಡಗರದ ಭಾಗವಾಗಿ ಓಣಿಗಳಲ್ಲಿ "ಕಾಮಣ್ಣನ ಪಟ್ಟಿ" ಹಿಡಿದು ಹುಡುಗರ ಹಾಗೂ ಯುವಕರ ದಂಡು ತಿರುಗಾಡುತ್ತಿದೆ. ಪಟ್ಟಣದ ಪ್ರಮುಖ ಸ್ಥಳಗಳಲ್ಲಿ ರತಿ-ಮನ್ಮಥರ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ಪೂಜೆ ಸಲ್ಲಿಸುವುದು ಹಾಗೂ ಹೋಳಿ ಹಾಡುಗಳನ್ನು ಹಾಡುವುದು ಸಹ ಸಂಭ್ರಮದ ಅಂಗವಾಗಿದೆ.

ಈ ಬಾರಿ ಚರ್ಮದ ಹಲಗೆಗಳಿಗಿಂತ ಫೈಬರ್ ಹಲಗೆಗಳಿಗೆ ಹೆಚ್ಚಿನ ಬೇಡಿಕೆ ಕಂಡುಬರುತ್ತಿದೆ. ಜೋರಾದ ಧ್ವನಿಯನ್ನು ಹೊರಡಿಸುವ ಫೈಬರ್ ಹಲಗೆಗಳು ಯುವಕರನ್ನು ಹೆಚ್ಚು ಆಕರ್ಷಿಸುತ್ತಿವೆ.

ಚಿಕ್ಕ ಹಲಗೆಗಳು 650 ರೂ.ಗಳಿಂದ 1500 ರೂ.ವರೆಗೆ ಮಾರಾಟವಾಗುತ್ತಿವೆ. ವಿಶೇಷವಾಗಿ ಚಲನಚಿತ್ರ ನಟ-ನಟಿಯರ ಭಾವಚಿತ್ರಗಳಿರುವ ಹಲಗೆಗಳಿಗೆ ಹೆಚ್ಚುವರಿ ಬೇಡಿಕೆ ಇದೆ ಎಂದು ವ್ಯಾಪಾರಿಗಳು ತಿಳಿಸಿದ್ದಾರೆ.

> "ಮಕ್ಕಳು ಬಾರಿಸುತ್ತಿರುವ ಹಲಗೆ ಸದ್ದು ಮನಸ್ಸಿಗೆ ಮುದ ನೀಡುತ್ತಿದೆ. ಹಿಂದಿನವರ ಸಂಪ್ರದಾಯವನ್ನು ಇಂದಿನ ಮಕ್ಕಳು ಉಳಿಸಿಕೊಂಡು ಹೋಗುತ್ತಿರುವುದು ಸಂತಸ ತಂದಿದೆ," "ಗಂಡಸರ ಹಬ್ಬವೆಂದೇ ಗುರುತಿಸಲ್ಪಡುವ ಈ ಹಬ್ಬದಲ್ಲಿ ಚಿಕ್ಕ ಮಕ್ಕಳು ಊಟವನ್ನೂ ಮರೆತು ಹಲಗೆ ಬಾರಿಸುತ್ತ ಓಣಿಗಳಲ್ಲಿ ಓಡಾಡುತ್ತಿರುವುದನ್ನು ನೋಡುವುದೇ ಒಂದು ಸೊಗಸು," ಎಂದು ನಿಡಗುಂದಿ ಗ್ರಾಮದ ಅಪ್ಪಣ್ಣ ಪಾಟೀಲ ಹೇಳಿದರು.
>
> **-ಉಮೇಶ ನವಲಗುಂದ,** ಹಾಲಕೇರಿ ಗ್ರಾಮದ ನಿವಾಸಿ.

> "ನಾವು ಸಣ್ಣವರಿದ್ದಾಗ ಕೊಡದ ಕಂಠಕ್ಕೆ, ಮಡಿಕೆಯ ಕಂಠಕ್ಕೆ ಸರಿ ಹಚ್ಚಿ ಹಲಗೆ ಬಾರಿಸುತ್ತಿದ್ದ ನೆನಪು ಇದೆ. ಈಗಿನ ಮಕ್ಕಳಿಗೆ ಫೈಬರ್ ಹಲಗೆಯೇ ಬೇಕು. ಆಗಿನ ಹಬ್ಬದ ಸಂಭ್ರಮವೇ ಬೇರೆ ತರಹದ್ದಾಗಿತ್ತು,"
>
> **- ಸಂಗಮೇಶ ಮೆಣಸಗಿ,** ಜಕ್ಕಲಿ ಗ್ರಾಮಸ್ಥ.

## ಜ. ರೇಣುಕಾಚಾರ್ಯ ಜಯಂತ್ಯುತ್ಸವ



■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ರೇಣುಕರು ಮಹಾತಪಸ್ವಿ ಅಗಸ್ತ್ಯಮುನಿಗೆ ವೀರಶೈವ ಧರ್ಮದ ಸಿದ್ಧಾಂತ ಮತ್ತು ಆಚರಣೆಗಳನ್ನು ಬೋಧಿಸಿ ಜೀವನ್ಮುಕ್ತಿಯನ್ನು ತಿಳಿಸಿಕೊಟ್ಟಿದ್ದಾರೆ ಎಂದು ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಪಟ್ಟಣದ ಪಟ್ಟಣ ಪಂಚಾಯಿತಿ ಸಭಾಭವನದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಜ. ರೇಣುಕಾಚಾರ್ಯ ಜಯಂತ್ಯುತ್ಸವದಲ್ಲಿ ಅವರು ಆಶೀರ್ವಚನ ನೀಡಿದರು.

ಆಧುನಿಕ ವಿಜ್ಞಾನ ಎಲ್ಲಿ ನಿರುತ್ತರವಾಗುವುದೋ ಅಲ್ಲಿಂದ ಭಾರತೀಯ ಆಧ್ಯಾತ್ಮ ಚಿಂತನೆ ಪ್ರಾರಂಭಗೊಳ್ಳುತ್ತದೆ ಎಂದು ಡಾ. ಎಸ್.ರಾಧಾಕೃಷ್ಣನ್ ಹೇಳಿದ ಮಾತು ಸತ್ಯ. ಲೌಕಿಕ ಜ್ಞಾನ ಭೌತಿಕ ಬದುಕಿಗೆ ಬೇಕಾದ ಶ್ರದ್ಧೆ, ಆಸಕ್ತಿ, ಪರಿಶ್ರಮ ನಿಷ್ಠೆ ಹಾಗೂ ಸಮರ್ಪಣೆ ಮೂಲಕ ಪಡೆಯಲು ಸಾಧ್ಯ. ಪಾರಮಾರ್ಥಿಕ ಜ್ಞಾನ ಅತ್ಯಮೂಲ್ಯ. ಪಾರಮಾರ್ಥಿಕ ಜ್ಞಾನ ಭವ್ಯ ಹಾಗೂ ಪವಿತ್ರವಾದುದು. ಬದುಕಿನ ಯಶಸ್ಸಿಗೆ ಲೌಕಿಕ ಜ್ಞಾನ ಹೇಗೆ ಅವಶ್ಯಕವೋ ಹಾಗೆಯೇ ನೊಂದ-ಬೆಂದ ಮನಕ್ಕೆ ಆಧ್ಯಾತ್ಮಿಕ ಜ್ಞಾನ ಅವಶ್ಯಕ. ಕಲಿಯುವುದು, ಹಣ ಹಾಗೂ ಕೀರ್ತಿ ಸಂಪಾದಿಸುವುದಷ್ಟೇ ಜೀವನದ ಗುರಿಯಲ್ಲ. ಸಂಸ್ಕಾರ ಮತ್ತು ಆದರ್ಶ ಮೌಲ್ಯ ಪರಿಪಾಲಿಸುವ ಅಗತ್ಯವಿದೆ ಎಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿ ಧರ್ಮ ಗ್ರಂಥದಲ್ಲಿ ನಿರೂಪಿಸಿದ್ದಾರೆ ಎಂದರು.

ಮಲ್ಲಯ್ಯ ಗುಂಡಗೋಪುರಮಠ, ಕುಮಾರಸ್ವಾಮಿ ಕೋರಧಾನ್ಯಮಠ, ಎಸ್.ಎ. ಹಿರೇಗೌಡ್ರ, ಎಂ.ಸಿ. ಹಿರೇವಡೇಯರ, ಶೇಖಪ್ಪಹೊನವಾಡ, ಉದಯ ಮುದೇನಗುಡಿ, ನಜ್ಮಾ ಬೇಲೇರಿ, ಎ.ಎಸ್. ಬಂಕಾಪುರ ಮುಂತಾದವರಿದ್ದರು.

## ಲತಾ ಬೆಟಗೇರಿ ನಿಧನ: ನೇತ್ರದಾನ



■ **ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಕೆ.ಸಿ. ರಾಣಿ ರಸ್ತೆಯ ಸಾಯಿಬಾಬಾ ಮಂದಿರದ ಬಳಿಯ ನಿವಾಸಿ ಲತಾ ರವಿ ಬೆಟಗೇರಿ (ಕುಲಕರ್ಣಿ) ರವಿವಾರ ನಿಧನರಾದರು. ಮೃತರಿಗೆ ಪತಿ ಹಾಗೂ ಬಂಧು-ಬಳಗವಿದೆ.

ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನ ಪ್ರೇರಣೆಯಿಂದಾಗಿ ಕುಟುಂಬಸ್ಥರು ಮೃತರ ನೇತ್ರದಾನ ಮಾಡಲು ಒಪ್ಪಿಗೆ ಸೂಚಿಸಿದ್ದರನ್ವಯ ಗದಗ ಜಿಮ್ಸ್‌ನ ನೇತ್ರ ತಜ್ಞರ ತಂಡ ನೇತ್ರದಾನ ಪ್ರಕ್ರಿಯೆ ಕೈಗೊಂಡರು.

ಈ ಸಂದರ್ಭದಲ್ಲಿ ರವಿ ಬೆಟಗೇರಿ, ಲಯನ್ಸ್ ಕ್ಲಬ್ ಅಧ್ಯಕ್ಷ ರಾಜು ವೇರ್ಣೆಕರ, ಕಾರ್ಯದರ್ಶಿ ರಾಜಣ್ಣ ಮಲ್ಲಾಡದ, ಖಜಾಂಚಿ ರೇಣುಕಪ್ರಸಾದ ಹಿರೇಮಠ, ರಮೇಶ ಶಿಗ್ಲಿ, ಸಂಜಯ ರೂದ್ದಂ ಮುಂತಾದವರಿದ್ದರು.

## ಶ್ರೀ ದಾನಮ್ಮದೇವಿ ಪುರಾಣ ಪ್ರಾರಂಭೋತ್ಸವ ಇಂದು

■ **ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಕಳಸಾಪುರ ಗ್ರಾಮದಲ್ಲಿ ಶ್ರೀ ಈಶ್ವರ ಬಸವಣ್ಣ ದೇವರ 16ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಮಾರ್ಚ್ 3ರಂದು ಸಂಜೆ 7 ಗಂಟೆಗೆ ಕಳಸಾಪುರ ದೇವಸ್ಥಾನ ಆವರಣದಲ್ಲಿ ಶಿವಶರಣೆ ಗುಡ್ಡಾಪುರದ ಶ್ರೀ ದಾನಮ್ಮ ದೇವಿ ಪುರಾಣ ಪ್ರಾರಂಭೋತ್ಸವ ಜರುಗುವುದು. ಕಾರ್ಯಕ್ರಮದಲ್ಲಿ ಮಲ್ಲಸಮುದ್ರದ ಓಂಕಾರೇಶ್ವರ ಹಿರೇಮಠದ ಪೂಜ್ಯಶ್ರೀ ಫಕ್ಕೀರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಹರ್ಲಾಪುರ ಶ್ರೀ ಕೊಟ್ಟೂರೇಶ್ವರ ಮಠದ ಪೂಜ್ಯಶ್ರೀ ಅಭಿನವ ಕೊಟ್ಟೂರೇಶ್ವರ ಮಹಾಸ್ವಾಮಿಗಳು ದಿವ್ಯ ಸಾನ್ನಿಧ್ಯ ವಹಿಸುವರು. ಕಳಸಾಪುರ ಗ್ರಾಮದ ಹಿರಿಯರಾದ ಅವರು ಶರದರಾವ ಹುಯಿಲಗೋಳ ಅವರು ಅಧ್ಯಕ್ಷತೆ ವಹಿಸುವರು. ಗದಗ ಜಿಲ್ಲಾ ಯೂತ್ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಕಾರ್ಯಕ್ರಮ ಉದ್ಘಾಟಿಸುವವರು. ಮುಖ್ಯ ಅತಿಥಿಗಳಾಗಿ ಉದ್ಯಮಿ ಸದಾಶಿವಯ್ಯ ಮದರಿಮಠ, ತಾ.ಪಂ ಮಾಜಿ ಅಧ್ಯಕ್ಷ ಬಿ.ಆರ್. ದೇವರೆಡ್ಡಿ, ಉದ್ಯಮಿ ಕಿರಣ ಬಾಂಡಗೆ ಆಗಮಿಸುವರು. ಪ್ರವಚನಕಾರರಾಗಿ ಶಿವಲಿಂಗಯ್ಯ ಶಾಸ್ತ್ರಿಗಳು ಹಿರೇಮಠ ಸಿದ್ದಾಪುರ ಹಾಗೂ ಸಂಗಡಿಗರಿಂದ ಪ್ರವಚನ ಕಾರ್ಯಕ್ರಮ ಜರುಗಲಿದ್ದು, ಕಾರ್ಯಕ್ರಮವು ಮಾ. 3ರಿಂದ ಮಾ. 15ರವರೆಗೆ ಪ್ರತಿದಿನ ಸಂಜೆ 7 ಗಂಟೆಗೆ ಜರುಗುವುದು ಎಂದು ಶ್ರೀ ಈಶ್ವರ ಬಸವಣ್ಣ ದೇವರ ಜಾತ್ರಾ ಕಮಿಟಿ ಪ್ರಕಟಣೆಯಲ್ಲಿ ತಿಳಿಸಿದೆ.

## ನೇಕಾರ ಸಹಕಾರ ಸಂಘಕ್ಕೆ ನೂತನ ಅಧ್ಯಕ್ಷರ ಆಯ್ಕೆ



■ **ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಇಲ್ಲಿಯ ನೇಕಾರರ ಸಹಕಾರ ಉತ್ಪಾದಕರ ಸಂಘದ ನೂತನ ಅಧ್ಯಕ್ಷರಾಗಿ ಅಂದಪ್ಪ ತಿಮ್ಮಾಪೂರ ಹಾಗೂ ಉಪಾಧ್ಯಕ್ಷರಾಗಿ ಭಾಷಾಸಾಬ ಹುಬ್ಬಳ್ಳಿ ಅವಿರೋಧವಾಗಿ ಆಯ್ಕೆಯಾದರು.

ನಿರ್ದೇಶಕರಾಗಿ ಈಶ್ವರಪ್ಪ ತಿಮ್ಮಾಪೂರ, ಮಂಜುನಾಥ ತಡಹಾಳ, ನಿಂಗಪ್ಪ ಬಿನ್ನಾಳ, ಅಬ್ದುಲ್ ರಹಮಾನಸಾಬ ಯರಗುಡಿ, ಅಬ್ಬಾಸಲಿ ಮೂಲಿಮನಿ, ಶಕುಂತಲಾ ಹೊನ್ನಾಲ, ಶಕುಂತಲಾ ಶೇಡದ, ಈರಣ್ಣ ತಡಹಾಳ, ಮಂಜುನಾಥ ಗದಗಿನ, ಶರಣಪ್ಪ ಮುಳ್ಳಾಳ, ದೇವೇಂದ್ರಪ್ಪ ಬಳ್ಳಾರಿ ಆಯ್ಕೆಯಾಗಿದ್ದಾರೆ.

ಚುನಾವಣಾಧಿಕಾರಿಯಾಗಿ ಗದಗ ಸಹಕಾರ ಸಂಘಗಳ ಉಪನಿಬಂಧಕರ ಕಛೇರಿ ಅಧೀಕ್ಷಕರಾಗಿ ಸವಿತಾ ಆಗಮಿಸಿದ್ದರು ಎಂದು ಕಾರ್ಯದರ್ಶಿ ಈರಣ್ಣ ತಿಮ್ಮಾಪೂರ ತಿಳಿಸಿದ್ದಾರೆ.

## ಸಿ.ವಿ. ರಾಮನ್ ಅಪ್ರತಿಮ ವಿಜ್ಞಾನಿ

■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ರಾಮನ್ ಪರಿಣಾಮದ ಮೂಲಕ ಜಗತ್ತಿನ ಗಮನ ಸೆಳೆದು ನೋಬಲ್ ಪಾರಿತೋಷಕಕ್ಕೆ ಪಾತ್ರರಾದ ಸರ್ ಸಿ.ವಿ. ರಾಮನ್ ಅಪ್ರತಿಮ ವಿಜ್ಞಾನಿ. ಅವರು ನಮ್ಮ ದೇಶದ ವೈಜ್ಞಾನಿಕ ಕಣ್ಮಣಿ ಎಂದು ಮುಖ್ಯ ಶಿಕ್ಷಕ ಮಂಜುನಾಥ ಗ್ರಾಮಪುರೋಹಿತ ಹೇಳಿದರು.

ಪಟ್ಟಣದ ಡಾ. ಕೆ.ಬಿ. ಧನ್ನೂರ ಪಿಎಸ್‌ಎಸ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಆಚರಿಸಲಾದ ರಾಷ್ಟ್ರೀಯ ವಿಜ್ಞಾನ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳಿಗೆ ಸರ್ ಸಿ.ವಿ. ರಾಮನ್‌ರವರ ಬಾಲ್ಯ, ಜೀವನ, ನಡೆದು ಬಂದ ದಾರಿಯ ಬಗ್ಗೆ ವಿವರಿಸಿದ ಮಂಜುನಾಥ ಅವರ ಸಂಶೋಧನೆಗಳ ಪರಿಚಯ ಮಾಡಿಕೊಟ್ಟರು. ರಾಮನ್ ಪರಿಣಾಮದ ಮೂಲಕ ಅವರು ಹೇಗೆ ಜಗತ್ಪ್ರಸಿದ್ಧಿಯಾದರು ಎಂಬುದನ್ನು ವಿವರಿಸಿದರು.


ಪ್ರಾಥಮಿಕ ವಿಭಾಗದ ಮುಖ್ಯ ಶಿಕ್ಷಕ ಸುರೇಶ ಮಲ್ಲನಗೌಡರ ಮಾತನಾಡಿ, ನೀವು ನಿಮ್ಮಲ್ಲಿ ವೈಜ್ಞಾನಿಕ ಮನೋಭಾವನೆಯನ್ನು ಬೆಳೆಸಿಕೊಳ್ಳಬೇಕು. ಬಿಡುವಿನ ಸಮಯದಲ್ಲಿ ವೈಜ್ಞಾನಿಕ ಲೇಖನಗಳನ್ನು ಓದುವ ಹವ್ಯಾಸ ರೂಢಿಸಿಕೊಳ್ಳಬೇಕೆಂದರು.

ಕಾರ್ಯಕ್ರಮದಲ್ಲಿ ಎನ್.ಎಂ. ತಹಸೀಲ್ದಾರ, ವಿ.ಜೆ. ಜೋಗಿ, ಆರ್. ಜೆ. ನಾಗರಾಣ, ಅಶ್ವಿನಿ ಹಡಪದ, ಕವಿತಾ, ಅಕ್ಷತಾ, ನಿರಂಜನ, ಪುಷ್ಪಾ ಹಿರೇವಡೆಯರ, ಎಂ.ವಿ. ವಾಲ್ಮೀಕಿ, ಬಿ.ಎಫ್. ನೀರಲಗಿ, ಎಂ.ಜಿ. ಮಸ್ಕಿ, ಸಿಬ್ಬಂದಿಗಳು, ವಿದ್ಯಾರ್ಥಿಗಳು ಭಾಗವಹಿಸಿದ್ದರು.




## ನಿಧನ

### ಹನಮಂತಪ್ಪ ವಡ್ಡರ



**ಡಂಬಳ:** ಗ್ರಾಮದ ಬೋವಿ ಸಮಾಜದ ಹಿರಿಯರು, ಪತ್ರಕರ್ತರು, ಶಿಕ್ಷಕರೂ ಆಗಿದ್ದ ಹನಮಂತಪ್ಪ ತುಂಬಪ್ಪ ವಡ್ಡರ (56) ಶನಿವಾರ ನಿಧನರಾದರು. ಮೃತರಿಗೆ ಇಬ್ಬರು ಪುತ್ರರು, ಪುತ್ರಿ, ಸಹೋದರ, ಮೊಮ್ಮಕ್ಕಳು ಅಪಾರ ಬಂಧು ಬಳಗವದೆ.

**ಸಂತಾಪ:** ಕ್ಷೇತ್ರ ಶಿಕ್ಷಣಾಧಿಕಾರಿ ಗಂಗಾದರ ಅಣ್ಣಿಗೇರಿ, ಜಿ.ಎಸ್. ಕೊರ್ಲಹಳ್ಳಿ, ಕೆ.ಕೆ.ಬಂಡಿ, ಪತ್ರಕರ್ತರಾದ ಸಿ.ಕೆ.ಗಣಪ್ಪನವರ, ಲಕ್ಷ್ಮಣ ದೊಡ್ಡಮನಿ, ರಿಯಾಜ್ ದೊಡ್ಡಮನಿ, ವಿಜಯ ಸೊರಟೂರ, ಸಿಆರ್ ಪಿಗಳಾದ ಮೃತ್ಯುಂಜಯ ಪೂಜಾರ, ಸಂಗನಗೌಡ ಪಾಟೀಲ್, ಶಿಕ್ಷಕ ವಾಯ್.ಎಸ್.ಚಲವಾದಿ, ಅಪಾರ ಶಿಕ್ಷಕರು, ಶಿಕ್ಷಕಿಯರು, ಡಂಬಳ, ಹಳ್ಳಿಕೇರಿ ಸೇರಿದಂತೆ ವಿವಿಧ ಗ್ರಾಮದ ಹಿರಿಯರು ತೀವ್ರ ಸಂತಾಪ ಸೂಚಿಸಿದ್ದಾರೆ.

### ಗುರುರಾಜರಾವ ಬಾಗಲಕೋಟ



**ಗದಗ :** ಗದಗ ಶಹರದ ಕಳಸಾಪೂರ ರಸ್ತೆಯ ಡಂಬಳ ನಾಕಾ ನಿವಾಸಿ ಬ್ರಾಹ್ಮಣ ಸಮಾಜದ ಹಿರಿಯರೂ, ನಿವೃತ್ತ ಬ್ಯಾಂಕ್ ನೌಕರರು ಆಗಿದ್ದ ಗುರುರಾಜರಾವ ಗೋವಿಂದರಾವ ಬಾಗಲಕೋಟ ಅವರು ತಮ್ಮ 75ನೇ ವಯಸ್ಸಿನಲ್ಲಿ ದಿ. 01-02-2026 ರವಿವಾರ ಬೆಳಿಗ್ಗೆ 4-00 ಕ್ಕೆ ನಿಧನರಾದರು.

ಮೃತರು ಪತ್ನಿ, ಪುತ್ರರು, ಸೊಸೆಯಂದಿರು ಹಾಗೂ ಮೊಮ್ಮಕ್ಕಳು ಮತ್ತು ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.. ಮೃತರ ಅಂತ್ಯಯಾತ್ರೆಯು ಅಂದೇ ಸಾಯಂಕಾಲ 5-30 ಗಂಟೆಗೆ ಜರುಗಿತು.

## ಶಿವಾಜಿ ಮಹಾರಾಜರ ತತ್ವಾದರ್ಶಗಳನ್ನು ಅಳವಡಿಸಿಕೊಳ್ಳಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಹಿಂದೂ ಧರ್ಮ, ದೇಶದ ಸಂಸ್ಕೃತಿಯನ್ನು ರಕ್ಷಣೆ ಮಾಡಿದ ಅಪ್ಪಟ ದೇಶಪ್ರೇಮಿ ಛತ್ರಪತಿ ಶಿವಾಜಿ ಮಹಾರಾಜರ ಇತಿಹಾಸವನ್ನು ಪ್ರತಿಯೊಬ್ಬರೂ ಅಧ್ಯಯನ ಮಾಡಬೇಕು ಎಂದು ಬಿಜೆಪಿ ಶಿರಹಟ್ಟಿ ಮಂಡಲ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ ತಿಳಿಸಿದರು.

ಅವರು ಪಟ್ಟಣದ ಅಖಂಡ ಭಾರತ ಯುವಸೇನೆ ಇವರ ವತಿಯಿಂದ ರವಿವಾರ ನಡೆದ ಛತ್ರಪತಿ ಶಿವಾಜಿ ಮಹಾರಾಜ ಜಯಂತ್ಯುತ್ಸವದ ಅಂಗವಾಗಿ ಶಿವಾಜಿ ಮಹಾರಾಜರ ಭವ್ಯಮೂರ್ತಿ ಮೆರವಣಿಗೆ ಚಾಲನೆ ನೀಡಿ ಮಾತನಾಡಿದರು.

ಶಿವಾಜಿ ಮಹಾರಾಜರ ಧೈರ್ಯ ಮತ್ತು ಸ್ಫೂರ್ತಿದಾಯಕ ಕಾರ್ಯಗಳು ಯುವಕರಿಗೆ ಪ್ರೇರಣೆ ಆಗಬೇಕು. ಅವರ ತತ್ವಾದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುಬೇಕು ಎಂದು ಹೇಳಿದರು.

ಶಿವಾಜಿ ಮಹಾರಾಜರ ಭವ್ಯಮೂರ್ತಿ ಶೋಭಾಯಾತ್ರೆ ಪಂಪ ವೃತ್ತದಿಂದ ಪ್ರಾರಂಭಗೊಂಡು, ಬಸ್ತಿಕೇರಿ ವಿದ್ಯಾರಣ್ಯ ವೃತ್ತ, ಹಾವಳಿ ಆಂಜನೇಯ ದೇವಸ್ಥಾನ, ಪಾದ ಗಟ್ಟಿ, ಪುರಸಭೆ, ಸರಕಾರಿ ಆಸ್ಪತ್ರೆ ಹಳೆ ಬಸ್‌ಸ್ಟಾಂಡ್ ಮುಂಭಾಗದಿಂದ ಪರ್ವತ ಮಲ್ಲಯ್ಯನ ದೇವಸ್ಥಾನಕ್ಕೆ ಬಂದು ಸಂಪನ್ನಗೊಂಡಿತು.

ಈ ಸಂದರ್ಭದಲ್ಲಿ ಅಮರೀಶ ಗಾಂಜಿ, ಶ್ರೇಯಾಂಕ ಹಿರೇಮಠ, ಪ್ರತಾಪ ಅಂಕಲಿ, ಎಂ.ಆರ್. ಪಾಟೀಲ, ಗಂಗಾಧರ ಮೆಣಸಿನಕಾಯಿ, ವಿವೇಕ ಕದಂ, ಚಂದ್ರಗೌಳಿ, ಶಕ್ತಿ ಕತ್ತಿ, ಈಶ್ವರ ಗದಗ, ಶಂಕರ ಶಳಕೆ, ಶರಣಬಸಪ್ಪ ಗಾಂಜಿ, ಪ್ರವೀಣ ದಶಮನಿ, ಚಂದ್ರು ಬಾರ್ಕಿ, ನವೀನ ಗಾಯಕವಾಡ, ಪ್ರಕಾಶ ಗುತ್ತಲ, ನವೀನ ಗುರಿಕಾರ, ಶಿವು ಆರೇರ, ಖಂಡಪ್ಪ ಅಣ್ಣಿಗೇರಿ, ಮಂಜುನಾಥ ಗಾಂಜಿ, ಆಕಾಶ ಸೌದತ್ತಿ, ಗೋವಿಂದ ಗೋಸಾವಿ ಸೇರಿದಂತೆ ನೂರಾರು ಯುವಕರು, ಹಿರಿಯರು ಇದ್ದರು.

### ಶ್ರೀ ಕನಕ ಸಾಹಿತ್ಯ ಸಂಭ್ರಮದ 100ನೇ ಉಪನ್ಯಾಸ ಕಾರ್ಯಕ್ರಮ

# ಮನುಕುಲಕ್ಕೆ ಶಾಂತಿಮಂತ್ರ ಕಲಿಸಿದವರು ಕನಕದಾಸರು

**■ವಿಜಯಸಾಕ್ಷಿ ಸುದ್ದಿ, ಗದಗ**

ನಾಡಿನ ಪುಣ್ಯದ ಫಲವಾಗಿ ಕನಕದಾಸರು ಜನಿಸಿ ಬಂದಿದ್ದಾರೆ. ನೂರಾರು ದಾರ್ಶನಕರಲ್ಲಿ ಕನದಾಸರು ಎದ್ದು ಕಾಣುತ್ತಾರೆ ಎಂದು ಕನಕಶ್ರೀ ಪ್ರಶಸ್ತಿ ಪುರಸ್ಕೃತರು ಹಾಗೂ ಸಾಹಿತಿಗಳಾದ ಡಾ. ಲಿಂಗದಳ್ಳಿ ಹಾಲಪ್ಪ ಹೇಳಿದರು.

ನಗರದ ಕನಕ ಭವನದಲ್ಲಿ ಬೆಂಗಳೂರಿನ ಶ್ರೀ ಕನಕದಾಸರ ಸಾಹಿತ್ಯ ಪ್ರಚಾರ ಸಮಿತಿ ಆಯೋಜಿಸಿದ್ದ ಶ್ರೀಕನಕ ಸಾಹಿತ್ಯ ಸಂಭ್ರಮದ 100ನೇ ಉಪನ್ಯಾಸದ ವೇದಿಕೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರೊ. ಸುಧಾ ಕೌಜಗೇರಿ ಮಾತನಾಡಿ, ಕನಕದಾಸರ ಸಾಹಿತ್ಯ ಕ್ಷೇತ್ರದಲ್ಲಿ ನಕ್ಷತ್ರವಾಗಿ ಬೆಳೆದವರು. 12ನೇ ಶತಮಾನದಲ್ಲಿ ಶರಣ ಸಾಹಿತ್ಯ ಬಂತು. ಕನಕದಾಸರ ಏಕಾಂಗಿಯಾಗಿ ಬೆಳೆದವರು. ಸಂತ, ಭಕ್ತ, ಕವಿ ಅಲ್ಲದೆ ಅವರೊಬ್ಬ ಮಹಾನ್ ಹೋರಾಟಗಾರರಾಗಿದ್ದಾರೆ. ಅವರ ಮುಂಡಿಗೆಗಳಿಗೆ ಈವರೆಗೂ ಉತ್ತರಿಸಲು ಸಾದ್ಯವಾಗಿಲ್ಲ ಎಂದು ಹೇಳಿದರು.

ರುದ್ರಣ್ಣ ಗುಳಗುಳಿ ಅವರು ಮಾತನಾಡಿ, ಈ ಕಾರ್ಯಕ್ರಮ ಸಂಘಟಿಸುವ ಹಿಂದೆ ಸಾಕಷ್ಟು ಶ್ರಮವಿದೆ. ಮುಂದಿನ ದಿನಗಳಲ್ಲಿ ಎಲ್ಲರೂ ಕೈಜೋಡಿಸಿ ಕನಕದಾಸ ಸಾಹಿತ್ಯವನ್ನು ಇನ್ನಷ್ಟು ಜನರಿಗೆ ಪರಿಚಯಿಸಬೇಕಾಗಿದೆ ಎಂದರು.

ಚಿಂತಕ ಮಂಜುನಾಥ ಹೊನ್ನನವರ ಮಾತನಾಡಿ, ದಿನನಿತ್ಯದ ಬದುಕಿನಲ್ಲಿ ಕನಕದಾಸರು ನೀಡಿದ ಜೀವನ ತತ್ವ, ಚಿಂತನೆ, ಜ್ಞಾನ ಹಸಿವಿನಿಂದ ಆತ್ಮಸ್ಥೈರ್ಯ ಬೆಳೆಯಲು ಸಾಧ್ಯ. ಇಡೀ ಜಗತ್ತಿನ ನ್ಯೂನತೆ ಕಿತ್ತಾಟವಾಗಿದೆ. ಹಾಗಾಗಿ ಅಹಂಕಾರ ಬಿಡಬೇಕು. ಮನುಕುಲಕ್ಕೆ ಶಾಂತಿಮಂತ್ರ ನೀಡಿದ ಕೀರ್ತಿ ಕನಕದಾಸರಿಗೆ ಸಲ್ಲುತ್ತದೆ ಎಂದರು.

ಡಾ. ಹನಮಗೌಡ ಪಾಟೀಲ ಮಾತನಾಡಿ, ಕನಕ ಸಂಭ್ರಮ ಕುಟುಂಬ, ವಿಜ್ಞಾನ, ತಂತ್ರಜ್ಞಾನ ಆವಿಷ್ಕಾರ, ಧಾರ್ಮಿಕ ಪ್ರಜ್ಞೆ ವಾಸ್ತವಿಕ ಅಂಶಗಳನ್ನು ತಿಳಿಸಲು ಸಂಶೋಧಕರು ಮುಂದಾಗಬೇಕು. ಕನಕ ಸಂದೇಶ ಎಲ್ಲ ಮಾಧ್ಯಮಗಳನ್ನು ಬಳಸಿಕೊಂಡು ಜನರಿಗೆ ಪ್ರಚಾರ ಮಾಡಲಾಗುತ್ತಿದೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾ ಉಪಧ್ಯಕ್ಷ ಸುರೇಶ ಕೊಪ್ಪದ ಮಾತನಾಡಿ, ಈ ಕಾರ್ಯಕ್ರಮವನ್ನು ಸಂಘಟಿಸುವಲ್ಲಿ ಸಮಾಜದ ಹಿರಿಯರು ಹಾಗೂ ಎಲ್ಲ ತಾಲೂಕಿನ ನೌಕರರ ಬಾಂಧವರು ಅಲ್ಲಲ್ಲಿ ಸಭೆ ನಡೆಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಸಾಕಷ್ಟು ಶ್ರಮಪಟ್ಟಿದ್ದಾರೆ. ಅವರೆಲ್ಲರೂ ಅಭಿನಂದಾರ್ಹರು ಎಂದು ಹೇಳಿದರು. ಕರ್ನಾಟಕ ಪ್ರದೇಶ ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕ್ಕೀರಪ್ಪ ಹೆಬಸೂರ ಅಧ್ಯಕ್ಷತೆ ವಹಿಸಿದ್ದರು. ವಾಸಣ್ಣ ಕುರಡಗಿ, ರವಿ ದಂಡಿನ, ಪ್ರಕಾಶ ಕರಿ ಮಾತನಾಡಿದರು. ವೇದಿಕೆ ಮೇಲೆ ರಾಜಶೇಖರ ಕಲ್ಲೂರ, ಡಿಡಿಪಿಐ ಆರ್.ಎಸ್. ಬುರಡಿ, ರಾಮಕೃಷ್ಣ ರೊಳ್ಳಿ, ನಿಂಗಪ್ಪ ಸವಣೂರ, ಮಹಾಂತೇಶ ನಿಟ್ಟಾಲಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

ನಂತರ ಶ್ರದ್ಧಾ ಕಬಾಡಿ, ಇಷಾ ಗಣಾಚಾರಿ ಅವರಿಂದ ಭರತನಾಟ್ಯ ಜರುಗಿತು. ಪದವಿಪೂರ್ವ ಕಾಲೇಜು ಹಾಗೂ ಪ್ರೌಢಶಾಲೆ ಹಂತದ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡ ಕನಕದಾಸರ ಸಾಹಿತ್ಯ ಪ್ರಭಂದ ಸ್ಪರ್ಧೆಯಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ನಗದು ಬಹುಮಾನ ಹಾಗೂ 76ರಿಂದ 100ನೇ ಆನ್‌ಲೈನ್ ಗೂಗಲ್ ಮೀಟ್‌ನಲ್ಲಿ ಕನಕದಾಸರ ಸಾಹಿತ್ಯದ ಉಪನ್ಯಾಸ ನೀಡಿದವರಿಗೆ ಸನ್ಮಾನಿಸಲಾಯಿತು.

ಸಮಿತಿಯ ರಾಜ್ಯ ಸಮನ್ವಯಧಿಕಾರಿ ಕೃಷ್ಣ ಖಾನಾಪೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರೊ. ಮಾರುತಿ ಮಡ್ಡಿ ಸ್ವಾಗತಿಸಿದರು. ಆರ್.ಜಿ. ಕೊರ್ಲಹಳ್ಳಿ ಕಾರ್ಯಕ್ರಮ ನಿರೂಪಿಸಿದರು. ಬಸವರಾಜ ಕೆರಿ ವಂದಿಸಿದರು.



ಹಂಪಿ ವಿಶ್ವವಿದ್ಯಾಲಯದ ಹಸ್ತಪ್ರತಿ ಶಾಸ್ತ್ರ ವಿಭಾಗ ಪ್ರೊ. ಎಫ್.ಟಿ. ಹಳ್ಳಿಕೇರಿ ಮಾತನಾಡಿ, ಸಂಘಟನೆ ಶ್ರದ್ಧೆ, ಶ್ರಮದಿಂದ 100ನೇ ಮಾಲಿಕೆ ಸಾಧ್ಯವಾಗಿದೆ. ಗದಗ ಜಿಲ್ಲೆ ಹಾಲಮತ ಸಮಾಜಕ್ಕೆ ಸಾಕಷ್ಟು ಕೊಡುಗೆ ನೀಡಿದೆ. 1920ರಲ್ಲಿ ಲಕ್ಷ್ಮೇಶ್ವರ ತಾಲೂಕಿನ ಬಟ್ಟೂರಿನಲ್ಲಿ ಟ್ರೇನಿಂಗ್ ಸೆಂಟರ್ ತೆರೆದಿದ್ದರು. ಹಾಲಮತ ಚರಿತ್ರೆಯನ್ನು ಬೆಳಿಕಿಗೆ ತಂದ ವಿ.ಆರ್. ಹನಮಂತಯ್ಯ ಅವರನ್ನು ಹಾಲುಮತ ಪಿತಾಮಹ ಎಂದು ಕರೆಯಬಹುದು. ಸಾಹಿತ್ಯ, ಸಮಾಜ ಬೆಳವಣಿಗೆ ಡೊಳ್ಳಿನ ಹಾಡು ಸಂಗ್ರಹಿಸಿ ಸಂಪುಟ ಹೊರತರಬೇಕು.

ಮನೆ ಮನೆಗೂ ಕನಕದಾಸರ ಸಾಹಿತ್ಯ ತಲುಪಿಸಬೇಕಾಗಿದೆ. ನಮ್ಮ ಆರಾಧ್ಯ ದೈವದ ಬಗೆಗೆ ಇರುವ ಹಲವು ಗೊಂದಲ ನಿವಾರಿಸಬೇಕಾಗಿದೆ ಎಂದರು.

## ಭಾರತ ಮಹಾತ್ಮರ ಪರಂಪರೆ ಹೊಂದಿರುವ ರಾಷ್ಟ್ರ




**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಆಧ್ಯಾತ್ಮಿಕ ತಳಹದಿಯನ್ನು ಹೊಂದಿರುವ ಭಾರತ ಶರಣರು, ಸಂತರು, ಮಹಾತ್ಮರ ಪರಂಪರೆ ಹೊಂದಿರುವ ಸೌಹಾರ್ದಯುತ ರಾಷ್ಟ್ರವಾಗಿದೆ ಎಂದು ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯರು ಹೇಳಿದರು.

ನರೇಗಲ್ಲ ಶ್ರೀ ಜಗದ್ಗುರು ಪಂಚಾಚಾರ್ಯ ಗ್ರಾಮೀಣಾಭಿವೃದ್ಧಿ ಶಿಕ್ಷಣ ಸಂಸೆಯ ಶ್ರೀ ರೇಣುಕಾಚಾರ್ಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶ್ರೀ ರೇಣುಕಾಚಾರ್ಯರ ಜಯಂತಿ ಅಂಗವಾಗಿ ಹಮ್ಮಿಕೊಂಡಿದ್ದ ಮೆರವಣಿಗೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಆದಿ ಜಗದ್ಗುರು ಶ್ರೀ ರೇಣುಕಾಚಾರ್ಯರು ಸರ್ವ ಧರ್ಮ ಸಮನ್ವಯಾವತಾರಿಗಳಾಗಿ ಧರ್ಮ ಸಹಿಷ್ಣುತೆಗಾಗಿ ಈ ಜಗತ್ತಿಗೆ ಅವತರಿಸಿ ಬಂದು ಎಲ್ಲರನ್ನೂ ಪ್ರೀತಿಸಿ, ಗೌರವಿಸುವ ಗುಣ ಹೊಂದಿರುವ ಈ ಧರ್ಮದ ಸ್ಥಾಪನೆಯ ಮೂಲಕ ಅವರು ಧರ್ಮಕ್ಕೆ ಭದ್ರವಾದ ಬುನಾದಿಯನ್ನು ಹಾಕಿದರು. ಆದ್ದರಿಂದ ಶ್ರೀ ರೇಣುಕರು ಎಂದಿಗೂ ಜಗದ್ವಂದ್ಯರು. ಶ್ರೀ ರೇಣುಕರು ತೇಊರಿದ ಲೀಲೆಗಳು ಅಪಾರ. ಅವುಗಳನ್ನು ಅರಿಯಬೇಕೆಂದರೆ ಚರಿತ್ರೆಯನ್ನು ಓದಬೇಕು. ಅವರ ಅವತಾರದಿಂದ ಈ ಭೂಮಿ ಪಾವನವಾಯಿತು. ಶ್ರೀ ಜಗದ್ಗುರು ರೇವಣಶಿದ್ದರಾಗಿ ಅವತರಿಸಿದ ರೇಣುಕಾಚಾರ್ಯರು ವೀರಶೈವ ಧರ್ಮದ ಯುಗ ಪ್ರವರ್ತಕರಾಗಿ ಈ ನಾಡಿನ ಜನರಲ್ಲಿ ಧರ್ಮ ಜಾಗೃತಿಯನ್ನು ಮೂಡಿಸಿದರು. ಅಗಸ್ತ್ಯ ಮುನಿಗೆ ಶಕ್ತಿ ವಿಶಿಷ್ಠಾದ್ವೈತ ಸಿದ್ಧಾಂತವನ್ನು ಬೋಧಿಸಿದರು. ಇದನ್ನೇ ನಾವಿಂದು ಸಿದ್ಧಾಂತ ಶಿಖಾಮಣಿಯೆಂದು ಅಧ್ಯಯನ ಮಾಡುತ್ತೇವೆ. ಈ ಗ್ರಂಥದಲ್ಲಿ ಜೀವನಕ್ಕೆ ಬೇಕಾದ ಅನೇಕ ಮೌಲ್ಯಗಳಿವೆ ಎಂದರು.

ಅನ್ನಪೂರ್ಣೇಶ್ವರಿ ಮಹಿಳಾ ಮಂಡಳದ ಅಧ್ಯಕ್ಷೆ ಕಸ್ತೂರಿಬಾಯಿ ಧನ್ನೂರ ಮಾತನಾಡಿದರು. ಸಂಸ್ಥೆಯ ಕಾರ್ಯದರ್ಶಿ ಈಶ್ವರ ಬೆಟಗೇರಿ, ಡಾ. ಆರ್.ಕೆ. ಗಚ್ಚಿನಮಠ, ಶಿವಾನಂದ ಹಿರೇಮಠ, ನಿವೃತ್ತ ಶಿಕ್ಷಕಿ ರತ್ನಮ್ಮ ಧಡೆಸೂರಮಠ, ಮುಖೋಪಾಧ್ಯಾಯೆ ನಿರ್ಮಲಾ ಹಿರೇಮಠ, ಎ.ಎಮ್. ಬೆಟಗೇರಿ, ಪ್ರಶಾಂತ ಹಿರೇಮಠ, ಮೈತ್ರಾ ನಂದಿ, ಸಿಬ್ಬಂದಿ ಹಾಗೂ ಮಕ್ಕಳು ಉಪಸ್ಥಿತರಿದ್ದರು. ವಿಜಯಲಕ್ಷ್ಮೀ ರೇಣುಕಮಠ ಸ್ವಾಗತಿಸಿದರು. ಎ.ಎಂ. ಆದಿ ನಿರೂಪಿಸಿದರು. ರೇಣುಕಾ ರಾಮಣ್ಣವರ ವಂದಿಸಿದರು.

## ಮಕ್ಕಳ ಭವಿಷ್ಯ ರೂಪಿಸಲು ಮುಂದಾಗಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶಿಕ್ಷಕ ವೃತ್ತಿ ಬಹು ಪವಿತ್ರವಾದ ವೃತ್ತಿಯಾಗಿದ್ದು, ಮಕ್ಕಳ ಭವಿಷ್ಯ ರೂಪಿಸುವ ನಿಟ್ಟಿನಲ್ಲಿ ಸದಾ ಕ್ರಿಯಾಶೀಲರಾಗಿ ಕೆಲಸ ನಿರ್ವಹಿಸುವ ಕಾರ್ಯವನ್ನು ಶಿಕ್ಷಕರು ಮಾಡಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯ್ಕ್ ಅಭಿಪ್ರಾಯಪಟ್ಟರು.

ಅವರು ಎಸ್‌ಟಿಪಿಎಂಬಿ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಶನಿವಾರ ನಡೆದ 21ನೇ ವರ್ಷದ ವಾರ್ಷಿಕೋತ್ಸವ 'ಏಕವಂಶೀಯತ: ಫೋಲ್ಡ್' ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ತಾಯಿ ಪಾರ್ವತಿ ಮಕ್ಕಳ ಬಳಗ ಸಂಸ್ಥೆಯ ಉಪಾಧ್ಯಕ್ಷೆ ಜಯಲಕ್ಷ್ಮೀ ಮಹಾಂತಶೆಟ್ಟರ ಹಾಗೂ ಕಾರ್ಯದರ್ಶಿ ಜಯಲಕ್ಷ್ಮೀ ಗಡ್ಡದೇವರಮಠ ಮಾತನಾಡಿ, ವಿದ್ಯಾರ್ಥಿಗಳು ಗುರು-ಹಿರಿಯರ ಮಾತುಗಳನ್ನು ಕೇಳಿ ಬದುಕಿನಲ್ಲಿ ಸನ್ಮಾರ್ಗದಲ್ಲಿ ಸಾಗಿ ಜೀವನದಲ್ಲಿ ಸಾಧನೆ ಮಾಡುವ ನಿಟ್ಟಿನಲ್ಲಿ ಸಾಗಬೇಕು. ಶ್ರಮಪಟ್ಟು ಓದಿ ಸಾಮಾನ್ಯರ ಗುಂಪಿನಿಂದ ಸಾಧಕರ ಗುಂಪಿಗೆ ಸೇರಬೇಕು. ಅದಕ್ಕಾಗಿ ಯೋಜನಾಬದ್ಧವಾಗಿ ರೂಪುರೇಷೆಗಳನ್ನು ಹಾಕಿಕೊಂಡು ಮುನ್ನಡೆಯಬೇಕು ಎಂದು ಹೇಳಿದರು.

ಪಾಲಕ ಪ್ರತಿನಿಧಿಯಾಗಿ ವಿಜಯಾ ಕೆಂಚನಗೌಡ ಮಾತನಾಡಿದರು. ಮುಖ್ಯೋಪಾಧ್ಯಾಯ ಪ್ರಭುಗೌಡ ಯಕಿಕೊಪ್ಪ ಪ್ರಾಸ್ತಾವಿಕವಾಗಿ ಮಾತನಾಡಿದರು.

ಮುಖ್ಯ ಶಿಕ್ಷಕಿ ಸ್ವಾತಿ ಉದಯ ಪೈ ಶಾಲೆ ನಡೆದು ಬಂದ ದಾರಿ, ಅಭಿವೃದ್ಧಿ ಹಾಗೂ ವಿದ್ಯಾರ್ಥಿಗಳ ಸಾಧನೆಯ ಕುರಿತು ವರದಿ ಮಂಡಿಸಿದರು.

ಸಂಸ್ಥೆಯ ಅಧ್ಯಕ್ಷೆ ಸುವರ್ಣ ಬಾಯಿಬಹದ್ದೂರ ದೇಸಾಯಿ, ಶಾರಕ್ಕಾ ಮಹಾಂತಶೆಟ್ಟರ, ರೋಹಿಣಿಬಾಯಿ ಬಹದ್ದೂರ ದೇಸಾಯಿ, ಇಸಿಓ ರಾಘವೇಂದ್ರ ಜೋಶಿ, ಸಿಆರ್‌ಪಿ ಶ್ರೀನಿವಾಸ್ ಮತ್ತೂರ ಡಾ. ಶಿವಾನಂದ ಹೂವಿನ ಉಪಸ್ಥಿತರಿದ್ದರು.

ನಂತರ ಶಾಲಾ ವಿದ್ಯಾರ್ಥಿಗಳಿಂದ ಶಿವನ ಭಕ್ತಿಯ ಪರಿ, ಯಕ್ಷಗಾನ, ಮೋಹಿನಿ ಅಟ್ಟಂ, ಭರತನಾಟ್ಯದಂತಹ ನೃತ್ಯ ಪ್ರದರ್ಶನ ನೀಡಿದರು. ಈ ಸಂದರ್ಭದಲ್ಲಿ ವಿಜಯಲಕ್ಷ್ಮೀ ದೇಸಾಯಿ, ರೂಪಾ ನವಲೆ, ವೀಣಾ ಜಾಮನೂರ, ಲೀಲಾವತಿ ಬೆಳಗಟ್ಟಿ, ಸಿಮ್ರಾನ ನಾಡಗೇರ, ಆಶಾ ಜಾದವ, ಪವಿತ್ರಾ ಕಾರಬಾರಿ, ಶಿವಯೋಗಿ ವಾಲಿಶೆಟ್ಟರ, ಶ್ವೇತಾ ಅರಳಿ ಸೇರಿದಂತೆ ಶಿಕ್ಷಕಿಯರು ಸಿಬ್ಬಂದಿಗಳು, ಪಾಲಕರು ಉಪಸ್ಥಿತರಿದ್ದರು. ವಿಜಯಲಕ್ಷ್ಮೀ ಮಹಾರಾಜಪೇಟ ಸ್ವಾಗತಿಸಿದರು. ಮಂಜುಳಾ ಪಾಟಿಲ ನಿರೂಪಿಸಿದರು, ವಿನಾಯಕ್ ದೊಡ್ಡಮನಿ ವಂದಿಸಿದರು.



## ರಾಷ್ಟ್ರ ಮಟ್ಟದ ಕುಸ್ತಿ ಪಂದ್ಯಾವಳಿಗೆ ಆಯ್ಕೆಯಾದ ರಾಹುಲ್ ಸಿದ್ದಮ್ಮನಹಳ್ಳಿಗೆ ಸನ್ಮಾನ



**■ವಿಜಯಸಾಕ್ಷಿ ಸುದ್ದಿ, ಗದಗ**

ಸ್ಥಳೀಯ ಎಸ್.ಎಂ. ಕೃಷ್ಣಾನಗರದ ವಸಂತ ಸಿದ್ದಮ್ಮನಹಳ್ಳಿ ಅವರ ಸುಪುತ್ರ ರಾಹುಲ್ ಸಿದ್ದಮ್ಮನಹಳ್ಳಿ ಅವರು ರಾಷ್ಟ್ರ ಮಟ್ಟದ ಕುಸ್ತಿ ಪಂದ್ಯಾವಳಿಗೆ ಆಯ್ಕೆಯಾಗಿರುವ ಹಿನ್ನೆಲೆ ಕಣಗಿನಹಾಳ ಹಾಗೂ ಹಾತಲಗೇರಿ ಗ್ರಾಮದ ಮಾಜಿ ಹಾಗೂ ಹಾಲಿ ಪೈಲ್ವಾನರು ಸೇರಿ ಭರ್ಜರಿ ಸನ್ಮಾನ ಕಾರ್ಯಕ್ರಮ ಹಮ್ಮಿಕೊಂಡರು.

ಯುವ ಕುಸ್ತಿಪಟು ರಾಹುಲ್ ಅವರ ಸಾಧನೆಯನ್ನು ಗ್ರಾಮಸ್ಥರು ಹಾಗೂ ಕುಸ್ತಿ ಅಭಿಮಾನಿಗಳು ಮೆಚ್ಚುಗೆ ವ್ಯಕ್ತಪಡಿಸಿದರು. ಅವರ ಮುಂದಿನ ಸ್ಪರ್ಧೆಗಳಲ್ಲಿ ಇನ್ನಷ್ಟು ಸಾಧನೆ ಮಾಡಿ ಜಿಲ್ಲೆಗೆ ಹಾಗೂ ರಾಜ್ಯಕ್ಕೆ ಕೀರ್ತಿ ತರುವಂತೆ ಆಶಿಸಿದರು. ಈ ಸಂದರ್ಭದಲ್ಲಿ ಗದಗ ಜಿಲ್ಲಾ ವಾಲ್ಮೀಕಿ ಸಮಾಜದ ಅಧ್ಯಕ್ಷ ಬಸವರಾಜ ಬೆಳದಡಿ, ಮುಖಂಡ ವಿರುಪಾಕ್ಷಿ ರಾಮಗಿರಿ, ಗದಗ ಜಿಲ್ಲಾ ವಾಲ್ಮೀಕಿ ಸಮಾಜದ ಯುವ ಘಟಕದ ಅಧ್ಯಕ್ಷ ಅನಿಲಕುಮಾರ ಸಿದ್ದಮ್ಮನಹಳ್ಳಿ, ಗದಗ ಜಿಲ್ಲಾ ಕುಸ್ತಿ ಅಸೋಸಿಯೇಷನ್ ಅಧ್ಯಕ್ಷ ವಸಂತ ಸಿದ್ದಮ್ಮನಹಳ್ಳಿ, ಕಾಟಾಪೂರ, ಆನಂದ ದಿಂಡಿ, ಮಾಜಿ ಸೈನಿಕ ವಸಂತ ವಾಲ್ಮೀಕಿ, ವೀರೆಶ ಚೋರಗಸ್ತಿ ಸೇರಿದಂತೆ ಮುಸ್ಲಿಂ ಸಮಾಜದ ಗುರು-ಹಿರಿಯರು ಹಾಗೂ ನೀರಲಗಿ ಗ್ರಾಮದ ಗುರು-ಹಿರಿಯರು ಉಪಸ್ಥಿತರಿದ್ದರು. ಕಾರ್ಯಕ್ರಮವು ಹರ್ಷೋದ್ಗಾರಗಳ ಮಧ್ಯೆ ನಡೆಯಿತು.

## ಹೋಳಿ ನೆಪದಲ್ಲಿ ಶಾಂತಿ ಕದಡಬೇಡಿ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಹೋಳಿ ಹಬ್ಬ ಗಂಡಸರ ಹಬ್ಬವೆಂದೇ ಪ್ರಸಿದ್ಧಿ. ಮಾ. 3ರಂದು ಪಟ್ಟಣದಲ್ಲಿ ಓಕುಳಿ ಹಬ್ಬ ನಡೆಯುತ್ತಿದ್ದು, ಈ ಹಬ್ಬದ ನೆಪದಲ್ಲಿ ಯಾರಾದರೂ ಶಾಂತಿ ಕದಡಲೆತ್ನಿಸಿದರೆ ಅವರ ವಿರುದ್ಧ ಕಠಿಣ ಕ್ರಮವನ್ನು ಕೈಗೊಳ್ಳಲಾಗುವುದೆಂದು ಡಿವೈಎಸ್‌ಪಿ ಪ್ರಭುಗೌಡ ಕಿರೇದಳ್ಳಿ ಹೇಳಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಹೋಳಿ ನಿಮಿತ್ತ ಜರುಗಿದ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಓಣಿಯಲ್ಲಿನ ಹಿರಿಯರು ತಮ್ಮ ಓಣಿಯ ಯುವಕರಿಗೆ ಮತ್ತು ಮಕ್ಕಳಿಗೆ ಸರಿಯಾದ ಜಾಗೃತಿ ನೀಡಿ ಅವರು ಯಾವುದೇ ಅಹಿತಕರ ಘಟನೆಗಳಲ್ಲಿ ಪಾಲ್ಗೊಳ್ಳದಂತೆ ನಿಗಾ ವಹಿಸಬೇಕು. ನಿಮ್ಮ ವ್ಯಾಪ್ತಿ ಮೀರಿ ಏನಾದರೂ ಅಹಿತಕರ ಘಟನೆ ನಡೆದರೆ ತಕ್ಷಣ ಅದನ್ನು ಠಾಣಾಧಿಕಾರಿಯ ಗಮನಕ್ಕೆ ತರಬೇಕೆಂದು ತಿಳಿಸಿದರು.

ಸಿಪಿಐ ವಿಜಯಕುಮಾರ ಮಾತನಾಡಿ, ಹೋಳಿ ಹಬ್ಬದ ಸಮಯದಲ್ಲಿ ಮದ್ಯ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಧಾರ್ಮಿಕ ಸ್ಥಳಗಳಿಗೆ ಬಣ್ಣ ಎರಚಿ ಮತೀಯ ಗಲಾಟೆಗೆ ಯತ್ನಿಸಿದರೆ ಅಂಥವರನ್ನು ಕಾನೂನಿನ ಕ್ರಮಕ್ಕೆ ಒಳಪಡಿಸಲಾಗುವುದು. ಪೊಲೀಸ್ ಇಲಾಖೆಯ ವತಿಯಿಂದ ಸೂಕ್ಷ್ಮ ಪ್ರದೇಶಗಳಲ್ಲಿ ಸಿಸಿ ಕೆಮರಾಗಳನ್ನು ಅಳವಡಿಸಲಾಗಿದೆ. ಈ ಬಗ್ಗೆ ಸಾರ್ವಜನಿಕರಿಗೆ ಎಚ್ಚರಿಕೆ ಇರಲಿ ಎಂದರು.

ಪಿಎಸ್‌ಐ ಐಶ್ವರ್ಯ ನಾಗರಾಳ ಮಾತನಾಡಿ, ನೈಸರ್ಗಿಕ ಬಣ್ಣವನ್ನು ಆಡಬೇಕೇ ಹೊರತು ರಾಸಾಯನಿಕ ಬಣ್ಣಗಳನ್ನು ಬಳಸಬಾರದು. ಈಗ ಪರೀಕ್ಷಾ ಸಮಯವಿರುವದರಿಂದ ಪರೀಕ್ಷಾರ್ಥಿಗಳಿಗೆ, ಸಿಬ್ಬಂದಿಗೆ ಯಾವುದೇ ತೊಂದರೆ ಮಾಡಬಾರದು. ಹಲಗೆ ಬಾರಿಸುವವರೂ ಸಹ ಎಚ್ಚರಿಕೆಯಿಂದ ಇರಬೇಕು. ಕಾಮಣ್ಣನಿಗೆಂದು ಮನೆಯ ಉಪಯುಕ್ತ ಸಾಮಾನುಗಳನ್ನು ಕದ್ದುಕೊಂಡು ಬರಬಾರದು. ಹಾಗೇನಾದರೂ ಕಂಡುಬಂದರೆ ಕಠಿಣ ಕ್ರಮವನ್ನು ಎದುರಿಸಬೇಕಾಗುತ್ತದೆ. ಸಾಮಾಜಿಕ ಜಾಲತಾಣಗಳಲ್ಲಿ ಯಾವುದೇ ರೀತಿಯ ಪ್ರಚೋದನಾತ್ಮಕ ಪೋಸ್ಟ್‌ಗಳನ್ನು ಮಾಡಬಾರದು ಎಂದು ಎಚ್ಚರಿಸಿದರು.

ಸಭೆಯನ್ನುದ್ದೇಶಿಸಿ ಶಶಿಧರ ಸಂಕನಗೌಡ್ರ, ಎಂ.ಎಸ್. ಧಡೇಸೂರಮಠ, ಮೈಲಾರಪ್ಪ ಚಳ್ಳಮರದ, ಚಂದ್ರು ರಾಥೋಡ, ಬಸವರಾಜ ವಂಕಲಕುಂಟಿ, ಉಮೇಶ ಪಾಟೀಲ ಮುಂತಾದವರು ಮಾತನಾಡಿದರು.


ಕರ್ನಾಟಕ ಸರ್ಕಾರ

**ಗದಗ-ಬೆಟಗೇರಿ ನಗರಸಭೆ ಕಾರ್ಯಾಲಯ-582101**

ಜಿಲ್ಲಾ : ಗದಗ ರಾಜ್ಯ : ಕರ್ನಾಟಕ
ದೂ : 08372-259932 ಇ-ಮೇಲ್ : ka.gadag.betageri.cmc@gmail.com
ನಂ.ಗಬೆನಸ/ತಾಂ.ವಿ/ವಹಿ/ಟೆಂಡರ್/2025-26 ದಿನಾಂಕ : 02-03-2026

**ಅಲ್ಪಾವಧಿ ಟೆಂಡರ್ ಪ್ರಕಟಣೆ**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯ ಪಾರದರ್ಶಕತೆ ಅಧಿನಿಯಮ 1999-2000 ರ ಪ್ರಕಾರ ಸ್ಟ್ಯಾಂಡರ್ಡ ಟೆಂಡರ್ ಡ್ಯಾಕ್ಯೂಮೆಂಟ್ಸ್ ನಿಯಮದನ್ವಯ ಸನ್ 2020-21 ರಿಂದ 2024-25ನೇ ಸಾಲಿನ ಎಸ್.ಎಫ್.ಸಿ. ಕುಡಿಯುವ ನೀರಿನ ಸಮಸ್ಯೆ ಪರಿಹರಿಸುವ ನಿಧಿ ಅನುದಾನದಲ್ಲಿ ಟೆಂಡರ್ ಕರೆದು ಉಳಿಕೆಯಾದ ಮೊತ್ತದಲ್ಲಿ 2ನೇ ಕರೆಯ ಒಟ್ಟು 01 ಕಾಮಗಾರಿಗಳಿಗೆ ಟೆಂಡರ್‌ಗಿಟ್ಟ ಮೊತ್ತ ರೂ. 6.10 ಲಕ್ಷಗಳಿಗೆ ಟೆಂಡರ್ ಆಹ್ವಾನಿಸಿದ್ದು, ಇಂಡೆಂಟ್ ನಂ: 1) **DMA/2025-26/OW/WORK INDENT-54251 (Call-2) http://kcppp.karnataka.gv.in** ರಲ್ಲಿ ಆಸಕ್ತರು ಇ-ಸಂಗ್ರಹಣ ವೇದಿಕೆಯಡಿ ಸಂಪರ್ಕಿಸಿ ಟೆಂಡರ್ ಸಲ್ಲಿಸಬಹುದಾಗಿದೆ.

ಬಿಡ್‌ದಾರರು ಟೆಂಡರ್ ವಿವರಗಳನ್ನು ಕೆ.ಪಿ.ಪಿ. ಪೋರ್ಟಲ್‌ನಲ್ಲಿ ಪಡೆದು ಸಂಬಂಧಿಸಿದ ಇಎಂಡಿ ಟೆಂಡರ್ ಫೀಗಳನ್ನು **Electronic** ಪದ್ಧತಿಯಲ್ಲಿ ತುಂಬಿ ಈ ಕೆಳಗೆ ನಿಗದಿಪಡಿಸಿದ ದಿನಾಂಕಗಳೊಳಗಾಗಿ ಟೆಂಡರ್ ಸಲ್ಲಿಸಬಹುದಾಗಿದೆ.

| | |
|---|---|
| ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ ಮತ್ತು ಸಮಯ | 11-03-2026 Up to 16.00 Hours |
| ತಾಂತ್ರಿಕ ಬಿಡ್‌ಗಳನ್ನು ತೆರೆಯುವ ದಿನಾಂಕ ಮತ್ತು ಸಮಯ (Technical Bids) | 12-03-2026 Up to 16.30 Hours |

ಸದರಿ ಟೆಂಡರ್‌ಗೆ ಸಂಬಂಧಿಸಿದ ದಿನಾಂಕ ಹಾಗೂ ಇತರೆ ಬದಲಾವಣೆಗಳಾದಲ್ಲಿ **kppp portal** ನಲ್ಲಿ ಪ್ರಕಟಿಸಲಾಗುವುದು. ಪತ್ರಿಕಾ ಪ್ರಕಟಣೆಯಲ್ಲಿ ಪ್ರಕಟಿಸಲಾಗುವುದಿಲ್ಲ.

ಸಹಿ/-
**ಪೌರಾಯುಕ್ತರು, ಗದಗ-ಬೆಟಗೇರಿ ನಗರಸಭೆ**



**ಕರ್ನಾಟಕ ನೀರಾವರಿ ನಿಗಮ ನಿಯಮಿತ**
**(ಕರ್ನಾಟಕ ಸರ್ಕಾರದ ಉದ್ಯಮ)**
**ಕಾರ್ಯಪಾಲಕ ಅಭಿಯಂತರರ ಕಛೇರಿ, ಕ.ನೀ.ನಿ.ನಿ.,**
**ಮ.ಬ.ದ.ಕಾ.ನಿ. ವಿಭಾಗ ನಂ. 1, ನರಗುಂದ ಜಿಲ್ಲೆ : ಗದಗ**
Tel No. 08377-244236 e-mail : knnlestablishment@gmail.com
ಸಂ:ಕನೀನಿನಿ/ಮಬದಕಾನಿವಿ-1/ಪಿಬಿ/ಟೆಂಡರ/2025-26/1697
ದಿನಾಂಕ : 02-03-2026

**ಅಲ್ಪಾವಧಿ ಟೆಂಡರ ಪ್ರಕಟಣೆ**

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಪರವಾಗಿ ಈ ವಿಭಾಗದಡಿ ಬರುವ ಕಾಮಗಾರಿಗಳಿಗೆ ಲೋಕೋಪಯೋಗಿ ಇಲಾಖೆಯಲ್ಲಿ ನೋಂದಾಯಿಸಲ್ಪಟ್ಟ 4ನೇ ದರ್ಜೆ ಮೇಲ್ಪಟ್ಟ ಗುತ್ತಿಗೆದಾರರಿಂದ ಶೇಕಡಾವಾರು (KW-1) ಟೆಂಡರನ್ನು ಏಕಲಕೋಟೆ ಪದ್ದತಿಯಲ್ಲಿ ಈ ಕೆಳಗಿನಂತೆ ಆಹ್ವಾನಿಸಲಾಗಿದೆ.
(1) ಒಟ್ಟು ಕಾಮಗಾರಿಗಳ ಸಂಖ್ಯೆ: 12 ಕಾಮಗಾರಿಗಳು (2) ಸಾಮಾನ್ಯ ವರ್ಗದವರ ಕಾಮಗಾರಿಗಳ ಸಂಖ್ಯೆ: 7 ಕಾಮಗಾರಿಗಳು (3) ಕೆಟಗರಿ-2(ಎ) ಕಾಮಗಾರಿಗಳ ಸಂಖ್ಯೆ: 2 ಕಾಮಗಾರಿಗಳು (4) ಪರಿಶಿಷ್ಟ ಜಾತಿಗೆ ಸೇರಿದ ಕಾಮಗಾರಿಗಳ ಸಂಖ್ಯೆ: 3 ಕಾಮಗಾರಿಗಳು (5) ಟೆಂಡರಗಿಟ್ಟ ಪ್ರತಿ ಕಾಮಗಾರಿಗಳ ಒಟ್ಟು ಅಂದಾಜು ಮೊತ್ತ (ಜಿ.ಎಸ್.ಟಿ ಸೇರಿಸಿ) ರೂ. **1.12** ಲಕ್ಷಗಳಿಂದ ರೂ. **12.00** ಲಕ್ಷಗಳವರೆಗೆ ಮತ್ತು ಇ.ಎಂ.ಡಿ ಮೊತ್ತ ರೂ. **1200.00** ರಿಂದ ರೂ. **24100.00** ವರೆಗೆ (6) ಟೆಂಡರ ಸಲ್ಲಿಸುವ ಕೊನೆಯ ದಿನಾಂಕ : **07-03-2026** ರಂದು ಸಂಜೆ 4.00 ಗಂಟೆಯವರೆಗೆ. (7) ಟೆಂಡರ ತೆರೆಯುವ ದಿನಾಂಕ : **09-03-2026** ರಂದು ಬೆಳಿಗ್ಗೆ 11.00 ಗಂಟೆ

ಇತರೆ ವಿವರಗಳನ್ನು ಇ-ಪ್ರೊಕ್ಯೂರ್‌ಮೆಂಟ ಪೋರ್ಟಲ್ ವೆಬ್‌ಸೈಟ್ ಮುಖೇನ KPPP.karnataka.gov.in ಮೂಲಕ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಈ ಕಚೇರಿ ದೂರವಾಣಿ ಸಂಖ್ಯೆ : **08377-244236** ನ್ನು ಕಚೇರಿಯ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

**ಸಹಿ/- ಕಾರ್ಯಪಾಲಕ ಅಭಿಯಂತರರು,**
**ಕನೀನಿನಿ ಮಬದಕಾನಿ ವಿಭಾಗ ನಂ.1 ನರಗುಂದ**
ವಾಸಾಸಂಇ/ಗದಗ/ಕೆಎಸ್ಎಂಸಿಎ/684/2025-26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka